









ಸಂಪುಟ: Vol: 04 | ಸಂಚಿಕೆ: Issue: 115 | ರಾಯಚೂರು Raichur | 17-10-2026 | ಶನಿವಾರ Saturday | ಪುಟ : Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685


# ಲೆಹ್ರಾ ದೋ ತಿರಂಗಾ ಪ್ರತಿಭಟನೆಗೆ ತೆರಳುತ್ತಿದ್ದ ಅಭಿಜೀತ್ ದೀಪ್ಕೆ ಪೊಲೀಸರ ವಶಕ್ಕೆ



ನವದೆಹಲಿ: ರಾಷ್ಟ್ರಧ್ವಜ ಹಾರಿಸುವ 'ಲೆಹ್ರಾ ದೋ ತಿರಂಗಾ' ಪ್ರತಿಭಟನೆಯಲ್ಲಿ ಭಾಗವಹಿಸಲು ತೆರಳುತ್ತಿದ್ದ ಕಾಕ್ರೋಚ್ ಜನತಾ ಪಾರ್ಟಿ (ಸಿಜೆಪಿ) ಸಂಸ್ಥಾಪಕ ಅಭಿಜೀತ್ ದೀಪ್ಕೆ ಅವರನ್ನು ಶುಕ್ರವಾರ ದೆಹಲಿ ಪೊಲೀಸರು ಮುನ್ನೆಚ್ಚರಿಕೆ ಕ್ರಮವಾಗಿ ವಶಕ್ಕೆ ಪಡೆದಿದ್ದಾರೆ. ಪ್ರತಿಭಟನೆಯಲ್ಲಿ ಪಾಲ್ಗೊಳ್ಳದಂತೆ ಪೊಲೀಸರು ಮೊದಲೇ ನೋಟಿಸ್ ಜಾರಿಗೊಳಿಸಿದ್ದರೂ ಕನ್ನಾಟ್ ಪ್ಲೇಸ್‌ನ ಸೆಂಟ್ರಲ್ ಪಾರ್ಕ್‌ಗೆ ತೆರಳಲು ಮುಂದಾದ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿದುಬಂದಿದೆ.

ದೆಹಲಿಯ ಪ್ರಮುಖ ವಾಣಿಜ್ಯ ಪ್ರದೇಶವಾದ ಕನ್ನಾಟ್ ಪ್ಲೇಸ್‌ನ ಸೆಂಟ್ರಲ್ ಪಾರ್ಕ್‌ನಲ್ಲಿ ಶುಕ್ರವಾರ ಸಂಜೆ 5 ಗಂಟೆಗೆ ತ್ರಿವರ್ಣ ಧ್ವಜ ಹಾರಿಸುವ ಕಾರ್ಯಕ್ರಮ ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ತೆರಳುತ್ತಿದ್ದ ದೀಪ್ಕೆ ಅವರನ್ನು ಮಾರ್ಗಮಧ್ಯೆಯೇ ಪೊಲೀಸರು ತಡೆದು ವಶಕ್ಕೆ ಪಡೆದಿದ್ದಾರೆ. ಕಳೆದ ಒಂದು ವಾರದ ಅವಧಿಯಲ್ಲಿ ಅವರನ್ನು ಪೊಲೀಸರು ವಶಕ್ಕೆ ಪಡೆದಿರುವುದು ಇದು ಎರಡನೇ ಬಾರಿ ಎನ್ನಲಾಗಿದೆ.

ದೀಪ್ಕೆ ಅವರನ್ನು ವಶಕ್ಕೆ ಪಡೆಯುವ ವೇಳೆ ಪೊಲೀಸರು, ಕನ್ನಾಟ್ ಪ್ಲೇಸ್ ಪ್ರದೇಶದಲ್ಲಿ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆಯ ಸೆಕ್ಷನ್ 163ರ ಅಡಿಯಲ್ಲಿ ನಿರ್ಬಂಧಾಜ್ಞೆ ಜಾರಿಯಲ್ಲಿರುವುದರಿಂದ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿರುವುದಾಗಿ ವರದಿಯಾಗಿದೆ.

ಸಾರ್ವಜನಿಕ ಶಾಂತಿ ಮತ್ತು ಸುವ್ಯವಸ್ಥೆಗೆ ಧಕ್ಕೆ ಉಂಟಾಗುವ ಸಾಧ್ಯತೆ ಇರುವ ಸಂದರ್ಭಗಳಲ್ಲಿ ನಿರ್ದಿಷ್ಟ ಚಟುವಟಿಕೆಗಳ ಮೇಲೆ ತಾತ್ಕಾಲಿಕ ನಿರ್ಬಂಧ ವಿಧಿಸಲು ಸೆಕ್ಷನ್ 163 ಅವಕಾಶ ಕಲ್ಪಿಸುತ್ತದೆ. ಈ ನಿಯಮದಡಿ ಹೊರಡಿಸಲಾದ ಆದೇಶಗಳನ್ನು ಉಲ್ಲಂಘಿಸುವುದನ್ನು ತಡೆಯಲು ಪೊಲೀಸರು ಕ್ರಮ ಕೈಗೊಳ್ಳಬಹುದು. ಆದರೆ ರಾಷ್ಟ್ರಧ್ವಜದೊಂದಿಗೆ ಶಾಂತಿಯುತ ಪ್ರತಿಭಟನೆ ನಡೆಸಲು ಮುಂದಾದವರನ್ನು ವಶಕ್ಕೆ ಪಡೆದಿರುವ ಕ್ರಮಕ್ಕೆ ಪ್ರತಿಭಟನಾಕಾರರು ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಇದೇ ವೇಳೆ ಮಂಡಿ ಹೌಸ್ ಸಮೀಪ ತ್ರಿವರ್ಣ ಧ್ವಜದೊಂದಿಗೆ ಮೆರವಣಿಗೆ ನಡೆಸುತ್ತಿದ್ದ ಆಲ್ ಇಂಡಿಯಾ ಸ್ಟೂಡೆಂಟ್ಸ್ ಅಸೋಸಿಯೇಷನ್ (ಎಐಎಸ್‌ಎ) ಅಧ್ಯಕ್ಷೆ ನೇಹಾ ಬೋರಾ ಸೇರಿದಂತೆ ಇತರ ಪ್ರತಿಭಟನಾಕಾರರನ್ನೂ ಪೊಲೀಸರು ವಶಕ್ಕೆ ಪಡೆದಿದ್ದಾರೆ ಎಂದು ತಿಳಿದುಬಂದಿದೆ. ಪೊಲೀಸರ ಕ್ರಮವನ್ನು ಖಂಡಿಸಿರುವ ಸಿಜೆಪಿ ಕಾರ್ಯಕರ್ತರು ಪ್ರತಿಭಟನೆಯನ್ನು ಮುಂದುವರಿಸಿದ್ದಾರೆ.

ಪ್ರತಿಭಟನೆಗೂ ಮುನ್ನ ದೀಪ್ಕೆ ತಂಗಿದ್ದ ನಿವಾಸಕ್ಕೆ ತೆರಳಿದ ಪೊಲೀಸರು, ಕನ್ನಾಟ್ ಪ್ಲೇಸ್‌ನಲ್ಲಿ ಮೆರವಣಿಗೆ ನಡೆಸದಂತೆ ನೋಟಿಸ್ ನೀಡಿದ್ದರು. ಅವರು ತಂಗಿದ್ದ ಎನ್‌ಸಿಪಿಎಸ್‌ಸಿಪಿ ವಕ್ತಾರ ಅನೀಶ್ ಗವಾಂಡೆ ಅವರ ನಿವಾಸದ ಬಳಿಯೂ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು ಎಂದು ವರದಿಯಾಗಿದೆ. ನಿಷೇಧಾಜ್ಞೆ ಜಾರಿಯಲ್ಲಿರುವ ಪ್ರದೇಶದಲ್ಲಿ ಅನುಮತಿಯಿಲ್ಲದೆ ಸಾರ್ವಜನಿಕ ಸಭೆ ಅಥವಾ ಮೆರವಣಿಗೆ ನಡೆಸಲು ಅವಕಾಶವಿಲ್ಲ ಎಂಬುದು ಪೊಲೀಸರ ನಿಲುವಾಗಿತ್ತು.

ಕನ್ನಾಟ್ ಪ್ಲೇಸ್ ವ್ಯಾಪಾರ ಚಟುವಟಿಕೆಗಳು ಹೆಚ್ಚಿರುವ ಪ್ರದೇಶವಾಗಿದ್ದು, ಪ್ರತಿಭಟನೆಯಿಂದ ಸಾರ್ವಜನಿಕ ಸಂಚಾರ ಮತ್ತು ಕಾನೂನು ಸುವ್ಯವಸ್ಥೆಗೆ ತೊಂದರೆಯಾಗುವ ಸಾಧ್ಯತೆ ಇದೆ ಎಂದು ಪೊಲೀಸರು ನಿರ್ಬಂಧಕ್ಕೆ ಕಾರಣ ನೀಡಿದ್ದಾರೆ. ಮತ್ತೊಂದೆಡೆ, ರಾಷ್ಟ್ರಧ್ವಜ ಹಿಡಿದು ಶಾಂತಿಯುತವಾಗಿ ಪ್ರತಿಭಟಿಸುವುದು ಪ್ರಜಾಸತ್ತಾತ್ಮಕ ಹಕ್ಕು ಎಂದು ಸಂಘಟಕರು ಪ್ರತಿಪಾದಿಸಿದ್ದಾರೆ.

ಈ ಪ್ರತಿಭಟನೆಗೆ ಸಿಜೆಪಿ

2ನೇ ಪುಟಕ್ಕೆ

## ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಶರಣಪ್ಪ ಮಟ್ಟೂರು ಬೆಂಬಲಿಸಲು ಎ. ವಸಂತಕುಮಾರ ಮನವಿ



ರಾಯಚೂರು: ಈಶಾನ್ಯ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯ ಹಿನ್ನೆಲೆಯಲ್ಲಿ ವಿಧಾನ ಪರಿಷತ್ ಸದಸ್ಯ ಹಾಗೂ ಕೆಪಿಸಿಸಿ ಕಾರ್ಯಾಧ್ಯಕ್ಷ ಎ. ವಸಂತಕುಮಾರ ಅವರು ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯಕ್ಕೆ ಭೇಟಿ ನೀಡಿ, ಉಪನ್ಯಾಸಕರೊಂದಿಗೆ ಸಮಾಲೋಚನೆ ನಡೆಸಿದರು. ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಶರಣಪ್ಪ ಮಟ್ಟೂರು ಅವರಿಗೆ ಪ್ರಥಮ ಪ್ರಾಶಸ್ತ್ಯದ ಮತ ನೀಡಿ ಬೆಂಬಲಿಸುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಉಪನ್ಯಾಸಕರನ್ನು ಉದ್ದೇಶಿಸಿ ಮಾತನಾಡಿದ ಅವರು, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯವನ್ನು ಮಂಜೂರು ಮಾಡಿ ಸ್ಥಾಪಿಸುವಲ್ಲಿ ಕಾಂಗ್ರೆಸ್ ಸರ್ಕಾರ ಪ್ರಮುಖ ಪಾತ್ರ ವಹಿಸಿದೆ. ಮುಂದಿನ ದಿನಗಳಲ್ಲಿ ವಿಶ್ವವಿದ್ಯಾಲಯದ ಶೈಕ್ಷಣಿಕ ಪ್ರಗತಿ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಅಗತ್ಯ ಸೌಲಭ್ಯಗಳ ಒದಗಿಸುವಿಕೆಗೆ ಸರ್ಕಾರದ ಮಟ್ಟದಲ್ಲಿ ಎಲ್ಲ ರೀತಿಯ ಪ್ರಯತ್ನಗಳನ್ನು ಮಾಡಲಾಗುವುದು ಎಂದು ಭರವಸೆ ನೀಡಿದರು.

ವಿಶ್ವವಿದ್ಯಾಲಯದಲ್ಲಿ ಖಾಲಿ ಇರುವ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಹುದ್ದೆಗಳ ಭರ್ತಿಗೆ ಸರ್ಕಾರದ ಗಮನ ಸೆಳೆಯಲಾಗುವುದು. ಅದೇ ರೀತಿ ರಾಜ್ಯದ ಪದವಿ ಮಹಾವಿದ್ಯಾಲಯಗಳು ಮತ್ತು ವಿವಿಧ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಪಾರದರ್ಶಕ ನೇಮಕಾತಿ ಪ್ರಕ್ರಿಯೆಯ ಮೂಲಕ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಶಿಕ್ಷಕರ ಹಕ್ಕುಗಳ ರಕ್ಷಣೆ, ಉದ್ಯೋಗ ಭದ್ರತೆ, ವೃತ್ತಿಪರ ಗೌರವ ಹಾಗೂ ಶೈಕ್ಷಣಿಕ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗೆ ಕಾಂಗ್ರೆಸ್ ಪಕ್ಷ ಬದ್ಧವಾಗಿದೆ. ಶಿಕ್ಷಕರು ಎದುರಿಸುತ್ತಿರುವ

2ನೇ ಪುಟಕ್ಕೆ

## ಸಿಬ್ಬಂದಿಗಳು ಸ್ವಚ್ಛತೆಗೆ ಆದ್ಯತೆ ನೀಡಿ: ಸಹಾಯಕ ಆಯುಕ್ತ ಡಾ. ಹಂಪಣ್ಣ




ರಾಯಚೂರು ಅ. 16 (ಕರ್ನಾಟಕ ವಾರ್ತೆ): ಅಡುಗೆ ಸಿಬ್ಬಂದಿಗಳು ವೈಯಕ್ತಿಕ ಸ್ವಚ್ಛತೆಗೆ ಆದ್ಯತೆ ನೀಡುವ ಮೂಲಕ ನಿಗದಿತ ಸಮಯದಲ್ಲಿ ಪೌಷ್ಟಿಕ ಆಹಾರ ತಯಾರಿಸಿ, ಮಕ್ಕಳಿಗೆ ನೀಡಬೇಕೆಂದು ರಾಯಚೂರು ಸಹಾಯಕ ಆಯುಕ್ತರಾದ ಡಾ. ಹಂಪಣ್ಣ ಸಜ್ಜನ್ ಅವರು ಹೇಳಿದರು.

ಅಕ್ಟೋಬರ್ 16ರ ಶುಕ್ರವಾರದಂದು ರಾಯಚೂರು ನಗರದ ಡಾ. ಬಿ.ಆರ್. ಅಂಬೇಡ್ಕರ್ ಮತ್ತು ಡಾ. ಬಾಬು ಜಗಜೀವನ್ ರಾಮ್ ಅವರ ಸಮುದಾಯ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ, ಪರಿಶಿಷ್ಟ ವರ್ಗಗಳ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ಕ್ರೈಸ್ ವಸತಿ ಶಾಲೆಗಳ ಅಧೀನದಲ್ಲಿರುವ ಕಾಯಂ / ಹೊರಸಂಪನ್ಮೂಲ ಡಿ-ಗ್ರೂಪ್ ಸಿಬ್ಬಂದಿಗಳಿಗೆ ಅಡುಗೆ ತಯಾರಿಸುವ ಮತ್ತು ಸ್ವಚ್ಛತೆಯನ್ನು ಕಾಪಾಡುವ ಕುರಿತು ಎರಡನೇ ದಿನದ ತರಬೇತಿ ಕಾರ್ಯಾಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಅಡುಗೆ ಸಿಬ್ಬಂದಿ ಕಡ್ಡಾಯವಾಗಿ ಸ್ವಚ್ಛವಾದ ಬಟ್ಟೆಗಳನ್ನು ಧರಿಸಬೇಕು. ಉಗುರುಗಳನ್ನು ಚಿಕ್ಕದಾಗಿ ಕತ್ತರಿಸಿಕೊಂಡು, ತಲೆಗೆ ಕ್ಯಾಪ್ ಹಾಗೂ ಕೈಗವಸುಗಳನ್ನು ಧರಿಸಿ ಅಡುಗೆ ಮಾಡುವುದು ಉತ್ತಮ. ಶಾಲೆ ಅಥವಾ ಕಾಲೇಜಿಗೆ ತೆರಳುವ ವಿದ್ಯಾರ್ಥಿಗಳಿಗೆ ಟಿಫಿನ್ ಮತ್ತು ಮಧ್ಯಾಹ್ನ ಹಾಗೂ ರಾತ್ರಿಯ ಊಟವನ್ನು ನಿಗದಿತ ಸಮಯಕ್ಕೆ ಸರಿಯಾಗಿ ಸಿದ್ಧಪಡಿಸಬೇಕು. ಸಮಯ ಪಾಲನೆ ಮಾಡದಿದ್ದರೆ ಅಡುಗೆಯಲ್ಲಿ ವ್ಯತ್ಯಾಸವಾಗಿ ಮಕ್ಕಳ ಆರೋಗ್ಯದಲ್ಲಿ ಏರುಪೇರಾಗಬಹುದು ಅಥವಾ ದೂರುಗಳು ಬರುತ್ತವೆ ಎಂದರು.

ಪ್ರೀ-ಮೆಟ್ರಿಕ್ ಅಥವಾ ಪೋಸ್ಟ್ ಮೆಟ್ರಿಕ್ ನಿಲಯಗಳಲ್ಲಿ 50, 100, 200 ಹಾಗೂ 300 ಮಕ್ಕಳಿರುವಲ್ಲಿ ಅಡುಗೆ ಸಿಬ್ಬಂದಿ ಮಕ್ಕಳೊಂದಿಗೆ ಸೌಜನ್ಯದಿಂದ ಹಾಗೂ ಉತ್ತಮ ಸಂವಹನದಿಂದ ನಡೆದುಕೊಳ್ಳಬೇಕು. ಸಿಬ್ಬಂದಿ ಸರಿಯಾಗಿ ಸ್ಪಂದಿಸದಿದ್ದರೆ ಮಕ್ಕಳಿಂದ ದೂರುಗಳು ಬರುವ ಸಾಧ್ಯತೆ ಇರುತ್ತದೆ ಎಂದರು.

2ನೇ ಪುಟಕ್ಕೆ

## ಸ್ಟಿಂಗ್ ಆಪರೇಷನ್ ತನಿಖೆಯಲ್ಲಿ ಅಧಿಕಾರ ದುರ್ಬಳಕೆ ಆರೋಪ: ಪ್ರಿಯಾಂಕ್ ಖರ್ಗೆ ವಿರುದ್ಧ ಕುಮಾರಸ್ವಾಮಿ ವಾಗ್ದಾಳಿ



ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಗುರಿಯಾಗಿಸಿಕೊಂಡು ನಡೆದಿದೆ ಎನ್ನಲಾದ ಸ್ಟಿಂಗ್ ಆಪರೇಷನ್ ವಿಡಿಯೋ ಪ್ರಕರಣದ ತನಿಖೆ ರಾಜಕೀಯ ಸ್ವರೂಪ ಪಡೆದುಕೊಳ್ಳುತ್ತಿದ್ದು, ತನಿಖೆಯ ಹೆಸರಿನಲ್ಲಿ ಅಧಿಕಾರ ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆರೋಪಿಸಿದ್ದಾರೆ. ಪ್ರಕರಣದ ನೈಜ ಆರೋಪಿಗಳನ್ನು ಪತ್ತೆಹಚ್ಚುವ ಬದಲು ಜೆಡಿಎಸ್ ಕಾರ್ಯಕರ್ತರನ್ನು ವಿಚಾರಣೆಗೆ ಒಳಪಡಿಸಲಾಗುತ್ತಿದೆ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಕರಣದ ತನಿಖೆಯಲ್ಲಿ ರಾಜ್ಯ ಸಚಿವ ಪ್ರಿಯಾಂಕ್ ಖರ್ಗೆ ಅನಗತ್ಯ ಹಸ್ತಕ್ಷೇಪ ಮಾಡುತ್ತಿದ್ದಾರೆ ಎಂದು ಆರೋಪಿಸಿದರು. ಬೆಂಗಳೂರಿನ ಪೊಲೀಸ್ ಆಯುಕ್ತರ ಕಚೇರಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಅಧಿಕಾರಿಗಳಿಗೆ ಬೆದರಿಕೆ ಹಾಕಿದ್ದೇನೆ ಎಂಬ ಆರೋಪವನ್ನು ತಳ್ಳಿಹಾಕಿದ ಅವರು, ನಿಷ್ಪಕ್ಷಪಾತ ತನಿಖೆಗೆ ಒತ್ತಾಯಿಸುವುದು ಬೆದರಿಕೆಯಲ್ಲ ಎಂದು ಸ್ಪಷ್ಟಪಡಿಸಿದರು.

ಗುರುವಾರ ಬೆಂಗಳೂರು ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರನ್ನು ಭೇಟಿಯಾಗಿ ಪ್ರಕರಣದ ಕುರಿತು ಸಮಗ್ರ ತನಿಖೆ ನಡೆಸುವಂತೆ ಮನವಿ ಮಾಡಿದ್ದೇನೆ. ತನಿಖೆಯಲ್ಲಿ ನನ್ನ ಪಾತ್ರದ ಬಗ್ಗೆ ಅನುಮಾನವಿದ್ದರೆ ಮೊದಲು ನನ್ನನ್ನೇ ವಿಚಾರಣೆಗೆ ಒಳಪಡಿಸಲಿ. ಆದರೆ ಯಾವುದೇ ಒತ್ತಡಕ್ಕೆ ಮಣಿಯದೆ ಸತ್ಯಾಂಶ ಹೊರತರಬೇಕು ಎಂಬುದಷ್ಟೇ ನನ್ನ ಉದ್ದೇಶ ಎಂದು ಹೇಳಿದರು.

ಪೊಲೀಸ್ ಆಯುಕ್ತರ ಕಚೇರಿಗೆ ತೆರಳಿದ ಸಂದರ್ಭದಲ್ಲಿ ನಡೆದ ಮಾತುಕತೆಯ ವಿಡಿಯೋ ದೃಶ್ಯಗಳೂ

2ನೇ ಪುಟಕ್ಕೆ

## ಕೃಷಿ ವಿವಿ ನೇಮಕಾತಿಯಲ್ಲಿ ಅಕ್ರಮ ಆರೋಪ: ತನಿಖೆಗೆ ಜೆಡಿಎಸ್ ಆಗ್ರಹ



ರಾಯಚೂರು: ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ 2023ನೇ ಸಾಲಿನಲ್ಲಿ ಸಹಾಯಕ ಪ್ರಾಧ್ಯಾಪಕರು ಸೇರಿದಂತೆ ವಿವಿಧ ಹುದ್ದೆಗಳಿಗೆ ನಡೆದ ನೇಮಕಾತಿ ಪ್ರಕ್ರಿಯೆಯಲ್ಲಿ ವ್ಯಾಪಕ ಭ್ರಷ್ಟಾಚಾರ ಹಾಗೂ ನಿಯಮಗಳ ಉಲ್ಲಂಘನೆ ನಡೆದಿದೆ ಎಂದು ಆರೋಪಿಸಿರುವ ಜಿಲ್ಲಾ ಜನತಾದಳ (ಜಾತ್ಯತೀತ) ಪಕ್ಷದ ಜಿಲ್ಲಾಧ್ಯಕ್ಷ ಎಂ. ವಿರೂಪಾಕ್ಷಿ, ನೇಮಕಾತಿ ಆದೇಶಗಳನ್ನು ರದ್ದುಗೊಳಿಸಿ ಪ್ರಕರಣದ ಕುರಿತು ಉನ್ನತ ಮಟ್ಟದ ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೃಷಿ ವಿಶ್ವವಿದ್ಯಾಲಯವು 2023ರ ಅಕ್ಟೋಬರ್ 18ರಂದು ವಿವಿಧ ಹುದ್ದೆಗಳ ಭರ್ತಿಗೆ ಅಧಿಸೂಚನೆ ಹೊರಡಿಸಿತ್ತು. ಆದರೆ, ನೇಮಕಾತಿಗೆ ಮುನ್ನ ಆರ್ಥಿಕ ಇಲಾಖೆಯಿಂದ ಅಗತ್ಯ ಅನುಮತಿ ಪಡೆಯದೆ ನಿಯಮಗಳನ್ನು ಉಲ್ಲಂಘಿಸಲಾಗಿದೆ. ನೇಮಕಾತಿ ಪ್ರಕ್ರಿಯೆಯ ಆರಂಭದಿಂದ ಅಂತಿಮ ಆಯ್ಕೆಯವರೆಗೆ ಹಲವು ಅನುಮಾನಾಸ್ಪದ ಬೆಳವಣಿಗೆಗಳು ನಡೆದಿದ್ದು, ಇವುಗಳ ಬಗ್ಗೆ ಸಮಗ್ರ ತನಿಖೆ ಅಗತ್ಯವಾಗಿದೆ ಎಂದು ಒತ್ತಾಯಿಸಿದರು.

ಸಹಾಯಕ ಪ್ರಾಧ್ಯಾಪಕರ ನೇಮಕಾತಿಗೆ ಲಿಖಿತ ಪರೀಕ್ಷೆ, ಸಂದರ್ಶನ, ಸ್ಕೋರ್ ಕಾರ್ಡ್ ಹಾಗೂ ಮೀಸಲಾತಿ ರೋಸ್ಟರ್ ಆಧಾರದಲ್ಲಿ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ವಿಧಾನವನ್ನು ನಿಗದಿಪಡಿಸಲಾಗಿತ್ತು. ವಿಶ್ವವಿದ್ಯಾಲಯದಲ್ಲಿಯೇ ಪರೀಕ್ಷೆ ನಡೆಸಲು ಅಗತ್ಯ ಸೌಲಭ್ಯಗಳಿದ್ದರೂ, ಪರೀಕ್ಷಾ ಕೇಂದ್ರವನ್ನು ಬೆಂಗಳೂರಿಗೆ ಸ್ಥಳಾಂತರಿಸಿರುವ ಉದ್ದೇಶವೇನು ಎಂಬುದಕ್ಕೆ ಆಡಳಿತ ಮಂಡಳಿ ಸ್ಪಷ್ಟನೆ ನೀಡಬೇಕಾಗಿದೆ. ಪರೀಕ್ಷಾ ಕೇಂದ್ರ ಬದಲಾವಣೆಯ ಹಿಂದಿನ ಕಾರಣಗಳು ಹಾಗೂ ಅದಕ್ಕೆ ಅನುಮೋದನೆ ನೀಡಿದ ಅಧಿಕಾರಿಗಳ ಪಾತ್ರವನ್ನು ಪರಿಶೀಲಿಸಬೇಕು ಎಂದು ಆಗ್ರಹಿಸಿದರು.

ನೇಮಕಾತಿ ಪ್ರಕ್ರಿಯೆಯಲ್ಲಿ ಕೆಲವು ಅಭ್ಯರ್ಥಿಗಳಿಂದ ತಲಾ ₹40 ಲಕ್ಷದಿಂದ ₹50 ಲಕ್ಷದವರೆಗೆ ಲಂಚ ಪಡೆಯಲಾಗಿದೆ ಎಂಬ ಗಂಭೀರ ಆರೋಪಗಳು ಕೇಳಿಬಂದಿವೆ. ಹಣ ನೀಡಿದ ಅಭ್ಯರ್ಥಿಗಳಿಗೆ ಅನುಕೂಲವಾಗುವಂತೆ ಪರೀಕ್ಷಾ ಕೇಂದ್ರಗಳ ಹಂಚಿಕೆ ಹಾಗೂ ಆಯ್ಕೆ ಪ್ರಕ್ರಿಯೆಯಲ್ಲಿ ಹಸ್ತಕ್ಷೇಪ ನಡೆಸಲಾಗಿದೆ ಎಂಬ ಅನುಮಾನವಿದ್ದು, ಈ ಕುರಿತು ನಿಷ್ಪಕ್ಷಪಾತ ತನಿಖೆ ನಡೆದರೆ ಸತ್ಯಾಂಶ ಹೊರಬರಲಿದೆ ಎಂದು ಹೇಳಿದರು.

ನೇಮಕಾತಿಯಲ್ಲಿನ

2ನೇ ಪುಟಕ್ಕೆ

# ಕುಡಿಯುವ ನೀರಿಗೆ 3 ಟಿಎಂಸಿ ಮೀಸಲಿಡಲು ಸಚಿವ ಅಜಯ್ ಧರ್ಮಸಿಂಗ್ ಆಗ್ರಹ

ರಾಯಚೂರು: ಮುಂಬರುವ ಬೇಸಿಗೆಯಲ್ಲಿ ರಾಯಚೂರು ನಗರದಲ್ಲಿ ಕುಡಿಯುವ ನೀರಿನ ಅಭಾವ ಉಂಟಾಗದಂತೆ ಮುನ್ನೆಚ್ಚರಿಕೆ ವಹಿಸಿ, ಈಗಿನಿಂದಲೇ 3 ಟಿಎಂಸಿ ನೀರನ್ನು ಕಾಯ್ದಿರಿಸಬೇಕು. ಜತೆಗೆ ನಾರಾಯಣಪುರ ಬಲದಂಡೆ ಕಾಲುವೆಯ ಕೊನೆಯಂಚಿನ ರೈತರಿಗೂ ಸಮರ್ಪಕವಾಗಿ ನೀರು ತಲುಪಿಸಲು ಕ್ರಮ ಕೈಗೊಳ್ಳಬೇಕು ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಧರ್ಮಸಿಂಗ್ ಒತ್ತಾಯಿಸಿದರು.

ಬೆಂಗಳೂರಿನ ವಿಕಾಸಸೌಧದಲ್ಲಿ ಗುರುವಾರ ಕೃಷ್ಣಾ ಮೇಲ್ದಂಡೆ ಯೋಜನೆಯ 2026-27ನೇ ಸಾಲಿನ ನೀರಾವರಿ ಸಲಹಾ ಸಮಿತಿ ಅಧ್ಯಕ್ಷ ಹಾಗೂ ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ವಿಜಯಾನಂದ ಕಾಶಪ್ಪನವರ್ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ಆಲಮಟ್ಟಿ ಮತ್ತು ನಾರಾಯಣಪುರ ಜಲಾಶಯಗಳಲ್ಲಿನ ನೀರಿನ ಲಭ್ಯತೆ, ಮುಂಗಾರು ಹಂಗಾಮಿನ ಬಾಕಿ ನೀರು ಬಿಡುಗಡೆ, ಹಿಂಗಾರು ಬೆಳೆಗಳಿಗೆ ನೀರಾವರಿ ಸೌಲಭ್ಯ ಹಾಗೂ ಬೇಸಿಗೆಯ ಕುಡಿಯುವ ನೀರಿನ ಅಗತ್ಯತೆ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ರಾಯಚೂರು ನಗರದ ಜನತೆಗೆ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾದ ಬಳಿಕ ಪರಿಹಾರ ಹುಡುಕುವುದಕ್ಕಿಂತ ಮುಂಚಿತವಾಗಿಯೇ ಅಗತ್ಯ ನೀರನ್ನು ಸಂಗ್ರಹಿಸಿಟ್ಟುಕೊಳ್ಳುವುದು ಸೂಕ್ತ. ಈ ಹಿನ್ನೆಲೆಯಲ್ಲಿ ನಗರದ ಕುಡಿಯುವ ನೀರಿನ ಬೇಡಿಕೆ ಪೂರೈಸಲು 3 ಟಿಎಂಸಿ ನೀರನ್ನು ಮೀಸಲಿಡುವಂತೆ ಸಚಿವರು ಮನವಿ ಮಾಡಿದರು.

ದೇವದುರ್ಗ ಭಾಗದಲ್ಲಿ ನಾರಾಯಣಪುರ ಬಲದಂಡೆ ಕಾಲುವೆಯ ಕೊನೆಯಂಚಿನ ರೈತರಿಗೆ ನೀರು ತಲುಪಿಸುವಲ್ಲಿ ಎದುರಾಗುತ್ತಿರುವ ಸಮಸ್ಯೆಗಳನ್ನೂ ಸಭೆಯ ಗಮನಕ್ಕೆ ತಂದರು. ಕಾಲುವೆ ಗೇಟ್‌ಗಳ ಕಾರ್ಯಾಚರಣೆ ಹಾಗೂ ನೀರಿನ ಮಟ್ಟದ ನಿರ್ವಹಣೆಯಲ್ಲಿ ಕಟ್ಟುನಿಟ್ಟಿನ ಕ್ರಮ ಅನುಸರಿಸಬೇಕು. ನೀರಿನ ಹಂಚಿಕೆಯಲ್ಲಿ ಸಮರ್ಪಕ ವ್ಯವಸ್ಥೆ ಜಾರಿಗೊಳಿಸಿ ಕೊನೆಯಂಚಿನ ರೈತರಿಗೆ ಅನ್ಯಾಯವಾಗದಂತೆ ನೋಡಿಕೊಳ್ಳಬೇಕು ಎಂದು ಒತ್ತಾಯಿಸಿದರು.

ವಿತರಣಾ ಕಾಲುವೆ ಸಂಖ್ಯೆ 1ರಿಂದ 14ರವರೆಗೆ ಕೈಗೊಳ್ಳಲಾಗುತ್ತಿರುವ ಸ್ಕಾಡಾ (SCADA) ತಂತ್ರಜ್ಞಾನ ಆಧಾರಿತ ಗೇಟ್ ಅಳವಡಿಕೆಯ ಮೊದಲ ಹಂತದ ಕಾಮಗಾರಿಯೊಂದಿಗೆ 15ರಿಂದ 18ರವರೆಗಿನ ಕಾಲುವೆಗಳಲ್ಲಿ ಎರಡನೇ ಹಂತದ ಕಾಮಗಾರಿಯನ್ನೂ ತ್ವರಿತವಾಗಿ ಆರಂಭಿಸಬೇಕು. ಇದರಿಂದ ನೀರಿನ ಹರಿವಿನ ಮೇಲೆ ಪರಿಣಾಮಕಾರಿ ನಿಗಾ ವಹಿಸುವುದರ ಜೊತೆಗೆ ಅನಗತ್ಯ ನೀರಿನ ಪೋಲು ತಡೆಯಲು ಸಾಧ್ಯವಾಗಲಿದೆ ಎಂದು ಅಭಿಪ್ರಾಯಪಟ್ಟರು.



ಜೇವರ್ಗಿ ವಿಧಾನಸಭಾ ಕ್ಷೇತ್ರದ ವಿವಿಧ ಕಾಲುವೆಗಳ ಕೊನೆಯ ಭಾಗದಲ್ಲಿರುವ ಗ್ರಾಮಗಳಿಗೆ ಸಮರ್ಪಕವಾಗಿ ನೀರು ತಲುಪದಿರುವುದರಿಂದ ಜನರು ಹಾಗೂ ಜಾನುವಾರುಗಳು ತೊಂದರೆ ಅನುಭವಿಸುತ್ತಿದ್ದಾರೆ. ಈ ಭಾಗದ ಕುಡಿಯುವ ನೀರು ಮತ್ತು ಅಗತ್ಯ ಬಳಕೆಗಾಗಿ ಮುಂಬರುವ ಬೇಸಿಗೆಯವರೆಗೆ 2.5 ಟಿಎಂಸಿ ನೀರು ಕಾಯ್ದಿರಿಸಬೇಕು ಎಂದು ಸಚಿವರು ಬೇಡಿಕೆ ಮಂಡಿಸಿದರು.

ಆಲಮಟ್ಟಿ ಮತ್ತು ನಾರಾಯಣಪುರ ಜಲಾಶಯಗಳಲ್ಲಿ ಒಟ್ಟು 85.61 ಟಿಎಂಸಿ ಬಳಕೆಗೆ ಲಭ್ಯವಿರುವ ನೀರಿನ ಹಿನ್ನೆಲೆಯಲ್ಲಿ ಪ್ರಸ್ತುತ ನಡೆಯುತ್ತಿರುವ ನೀರು ಬಿಡುಗಡೆಯ ಅವಧಿಯನ್ನು ಅಕ್ಟೋಬರ್ 25ರವರೆಗೆ ವಿಸ್ತರಿಸಲು ಸಭೆಯಲ್ಲಿ ನಿರ್ಧರಿಸಲಾಯಿತು. ಅಕ್ಟೋಬರ್ 26ರಿಂದ ನವೆಂಬರ್ 2ರವರೆಗೆ ಕಾಲುವೆಗಳಲ್ಲಿ ನೀರು ಹರಿಸುವುದನ್ನು ಸ್ಥಗಿತಗೊಳಿಸಿ, ನವೆಂಬರ್ 3ರಿಂದ 12ರವರೆಗೆ ಮತ್ತೆ ಹತ್ತು ದಿನಗಳ ಕಾಲ ನೀರು ಬಿಡುಗಡೆ ಮಾಡಲು ತೀರ್ಮಾನಿಸಲಾಯಿತು.

ಹಿಂಗಾರು ಹಂಗಾಮಿನ ನೀರಾವರಿಗೆ ಅಗತ್ಯ ಪ್ರಮಾಣದ ನೀರು ಲಭ್ಯವಿಲ್ಲದ ಕಾರಣ ಹಿಂಗಾರು ಬೆಳೆಗಳಿಗೆ ನೀರು ಪೂರೈಸಲು ಸಾಧ್ಯವಿಲ್ಲ ಎಂಬ ನಿರ್ಧಾರಕ್ಕೆ ಸಭೆ ಬಂದಿತು. ಉಳಿದ ನೀರನ್ನು ಕುಡಿಯುವ ನೀರು, ಕೆರೆಗಳ ಭರ್ತಿ ಹಾಗೂ ಇತರ ಅತ್ಯಗತ್ಯ ಬಳಕೆಗಳಿಗೆ ಮೀಸಲಿಡಲು ತೀರ್ಮಾನಿಸಲಾಯಿತು.

ಕಾಲುವೆಗಳ ಕೊನೆಯ ಭಾಗದ ರೈತರಿಗೆ ನೀರು ತಲುಪುವಂತೆ ಮಾಡಲು ಅನಧಿಕೃತವಾಗಿ ನೀರು ಎತ್ತುವ ಚಟುವಟಿಕೆಗಳಿಗೆ ಕಡಿವಾಣ ಹಾಕಬೇಕು. ಇದಕ್ಕಾಗಿ ಸಂಬಂಧಪಟ್ಟ ಇಲಾಖೆಗಳು ಪರಸ್ಪರ ಸಮನ್ವಯ ಸಾಧಿಸಿ ನಿರಂತರ ನಿಗಾ ವಹಿಸುವಂತೆ ಸೂಚಿಸಲಾಯಿತು.

ಲಭ್ಯವಿರುವ ನೀರಿನ ಪ್ರತಿಯೊಂದು ಹನಿಯನ್ನೂ ಸಮರ್ಪಕವಾಗಿ ಬಳಸಿಕೊಳ್ಳುವುದು ಅಗತ್ಯ. ಹಳೆಯ ಕಾಲುವೆಗಳ ಆಧುನೀಕರಣ ಹಾಗೂ ತಂತ್ರಜ್ಞಾನ ಆಧಾರಿತ ನೀರು ನಿರ್ವಹಣೆಗೆ ಆದ್ಯತೆ ನೀಡುವ ಮೂಲಕ ರಾಯಚೂರು ಮತ್ತು ಜೇವರ್ಗಿ ಭಾಗದ ಜನರು, ಜಾನುವಾರುಗಳು ಹಾಗೂ ಕೊನೆಯಂಚಿನ ರೈತರ ನೀರಿನ ಅಗತ್ಯತೆ ಪೂರೈಸಬೇಕು ಎಂದು ಡಾ. ಅಜಯ್ ಧರ್ಮಸಿಂಗ್ ತಿಳಿಸಿದರು.

ಸಭೆಯಲ್ಲಿ ಸಚಿವರಾದ ಎಂ.ಬಿ. ಪಾಟೀಲ್, ಡಾ. ಶರಣಪ್ರಕಾಶ್ ಪಾಟೀಲ್, ಮಾಜಿ ಸಚಿವ ಶರಣಬಸಪ್ಪ ದರ್ಶನಾಪುರ, ಸಂಸದ ಜಿ. ಕುಮಾರ್ ನಾಯಕ್, ಶಾಸಕರಾದ ಉಮೇಶ್ ಮೇಟಿ, ಜೆ.ಟಿ. ಪಾಟೀಲ್, ಜಗದೀಶ್ ಗುಡಗುಂಟಿ ಸೇರಿದಂತೆ ವಿವಿಧ ಜನಪ್ರತಿನಿಧಿಗಳು ಹಾಗೂ ಕೃಷ್ಣ ಭಾಗ್ಯ ಜಲ ನಿಗಮದ ಅಧಿಕಾರಿಗಳು ಉಪಸ್ಥಿತರಿದ್ದರು.

## ಇಂದು ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಪೂರ್ವಭಾವಿ ಸಭೆ

ರಾಯಚೂರು ಅ. 16 (ಕರ್ನಾಟಕ ವಾರ್ತೆ): ಜಿಲ್ಲಾಡಳಿತದಿಂದ ಅಕ್ಟೋಬರ್ 26ರ ಸೋಮವಾರ ದಂದು ಜಿಲ್ಲಾ ಮಟ್ಟದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸುವ ಸಂಬಧ ಅಕ್ಟೋಬರ್ 17ರ ಮಧ್ಯಾಹ್ನ 3.30ಕ್ಕೆ ರಾಯಚೂರು ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಪೂರ್ವಭಾವಿ ಸಿದ್ಧತಾ ಸಭೆಯನ್ನು ಏರ್ಪಡಿಸಲಾಗಿದ್ದು, ಸಂಬಧ ಪಟ್ಟ ಜಿಲ್ಲಾ ಮಟ್ಟದ ಅಧಿಕಾರಿಗಳು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಸಭೆಗೆ ಆಗಮಿಸಿ, ತಮ್ಮ ಅಮೂಲ್ಯ ಸಲಹೆ ಸೂಚನೆಗಳನ್ನು ನೀಡಿ ಯಶ್ವಸಿಗೊಳಿಸುವಂತೆ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳಾದ ಶಿವಮಾನಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅ. 28ರಂದು ಜಿಲ್ಲಾ ಮಟ್ಟದ ಯುವಜನೋತ್ಸವ ಆಯ್ಕೆ ಪ್ರಕ್ರಿಯೆ

ರಾಯಚೂರು ಅ. 16 (ಕರ್ನಾಟಕ ವಾರ್ತೆ): ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ 2026-27ನೇ ಸಾಲಿನ ರಾಯಚೂರು ಜಿಲ್ಲಾ ಮಟ್ಟದ 15 ರಿಂದ 29 ವರ್ಷದೊಳಗಿನವರಿಗೆ ಯುವಜನೋತ್ಸವ ಆಯ್ಕೆ ಪ್ರಕ್ರಿಯೆಯನ್ನು ಅನಿವಾರ್ಯ ಕಾರಣಗಳಿಂದ ಅಕ್ಟೋಬರ್ 28ರ ಬೆಳಿಗ್ಗೆ 9ಕ್ಕೆ ನಗರದ ವೇದಾಂತ ಡಿಗ್ರಿ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿದ್ದು, ಆಸಕ್ತ ಯುವಜನಾಂಗವು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿರೇಶ ನಾಯಕ ಅವರು ತಿಳಿಸಿದ್ದಾರೆ.

ಹಿಂದೆ ಅಕ್ಟೋಬರ್ 30ರಂದು ನಡೆಸಲು ನಿರ್ಧಾರಿಲಾಗಿತ್ತು. ಆದರೆ ಅನಿವಾರ್ಯ ಕಾರಣಗಳಿಂದ ದಿನಾಂಕವನ್ನು ಹಿಂದೂಡಲಾಗಿದ್ದು, ಅಕ್ಟೋಬರ್ 28ರಂದು ನಡೆಸಲಾಗುವುದು. ಜಿಲ್ಲೆಯ ಸ್ಪರ್ಧಾಳುಗಳು ಸಹಕಾರಿಸುವಂತೆ ಕೋರಲಾಗಿದೆ.

ಸಾಂಸ್ಕೃತಿಕ ಸ್ಪರ್ಧೆಗಳ ವಿವರ ಈ ಕೆಳಗಿನಂತಿದೆ: ಜನಪದನೃತ್ಯ ತಂಡದಲ್ಲಿ 7+3 ಭಾಗವಹಿಸುವರ ಸಂಖ್ಯೆಯನ್ನು ಮಿತಿಗೊಳಿಸಲಾಗಿದ್ದು, 8 ನಿಮಿಷಕ್ಕೆ ಅವಧಿಯನ್ನು ನಿಗದಿಪಡಿಸಲಾಗಿದೆ.

ಜನಪದ ಗೀತೆ ತಂಡದಲ್ಲಿ 7+3 ಭಾಗವಹಿಸುವರ ಸಂಖ್ಯೆಯನ್ನು ಮಿತಿಗೊಳಿಸಲಾಗಿದ್ದು, 5 ರಿಂದ 8 ನಿಮಿಷಕ್ಕೆ ಅವಧಿಯನ್ನು ನಿಗದಿಪಡಿಸಲಾಗಿದೆ. ಕವಿತೆ ಬರೆಯುವುದು (ಪ್ರಾದೇಶಿಕಭಾಷೆ/ಹಿಂದಿ/ಆಗ್ಲ) ಒಬ್ಬರು ಭಾಗವಹಿಸುವರ ಸಂಖ್ಯೆಯನ್ನು ಮಿತಿಗೊಳಿಸಲಾಗಿದ್ದು, 1 ಗಂಟೆ 30 ನಿಮಿಷಕ್ಕೆ ಅವಧಿಯನ್ನು ನಿಗದಿಪಡಿಸಲಾಗಿದೆ. ನುಕ್ಕಾಡ್ ನಾಟಕ 10 ಜನ ಭಾಗವಹಿಸುವರ ಸಂಖ್ಯೆಯನ್ನು ಮಿತಿಗೊಳಿಸಲಾಗಿದ್ದು, 7ನಿಮಿಷಕ್ಕೆ ಸಮಯವನ್ನು ನಿಗದಿಪಡಿಸಲಾಗಿದೆ.

ಮೇಲಿನ ಸ್ಪರ್ಧೆಗಳ ಆಯ್ಕೆ ಪ್ರಕ್ರಿಯೆಯಲ್ಲಿ ರಾಯಚೂರು ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ಶಾಲಾ ಕಾಲೇಜು ವಿದ್ಯಾರ್ಥಿಗಳು/ ವಿದ್ಯಾರ್ಥಿನಿಯರು ಹಾಗೂ ಸಂಘ ಸಂಸ್ಥೆಗಳು, ಯುವಕ/ ಯುವತಿ ಮಂಡಳಿಗಳು ಇನ್ನಿತರೇ ಸಂಸ್ಥೆಗಳಿದ ಹೆಚ್ಚಿನ ಸಂಖ್ಯೆಯಲ್ಲಿ ಸ್ಪರ್ಧಾಳುಗಳು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು. ನಿಗದಿಪಡಿಸಿದ ದಿನಾಂಕ ಹಾಗೂ ಸ್ಥಳದಂದು ಬೆಳಿಗ್ಗೆ 9ಗಂಟೆಯ ಒಳಗಾಗಿ ಸ್ಪರ್ಧಾಳುಗಳು ತಮ್ಮ ಹೆಸರನ್ನು ನೋಂದಾಯಿಸಕೊಳ್ಳತಕ್ಕದ್ದು, ವಯಸ್ಸಿನ ದೃಢೀಕರಣಕ್ಕೆ ಆಧಾರ್ ಕಾರ್ಡ್, ಗುರುತಿನ ಚೀಟಿ ಅಥವಾ ಜನ್ಮ ದಿನಾಂಕ ಇರುವ ಸರಕಾರಿ ಪ್ರಮಾಣ ಪತ್ರವನ್ನು ಹಾಗೂ ಸ್ವಯಂ ಬ್ಯಾಂಕ್ ಖಾತೆಯ ಝರಾಕ್ಸ್ ಪ್ರತಿಯನ್ನು ಕಡ್ಡಾಯವಾಗಿ ಸಲ್ಲಿಸುವುದು. ರಾಯಚೂರು ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಂದ ಸ್ಪರ್ಧಾಳುಗಳು ಭಾಗವಹಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾಧಿಕಾರಿಗಳು, ರಾಯಚೂರು ಇವರನ್ನು ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ವಿರೇಶ ನಾಯಕ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅ. 19 ರಂದು ತುಂಗಭದ್ರಾ ನೀರಾವರಿ ಸಲಹಾ ಸಮಿತಿ ಸಭೆ

ರಾಯಚೂರು ಅ. 16 (ಕರ್ನಾಟಕ ವಾರ್ತೆ): 2026-27ನೇ ಸಾಲಿನ ಮುಂಗಾರು ಹಂಗಾಮಿನ ಬಾಕಿ ಅವಧಿ ಹಾಗೂ ಹಿಂಗಾರು ಹಂಗಾಮಿನ ನೀರು ನಿರ್ವಹಣೆಗೆ ಸಂಬಧಿಸಿದತೆ ತುಂಗಭದ್ರಾ ಯೋಜನೆ ಮತ್ತು ವಿಜಯನಗರ ಕಾಲುವೆಗಳ 127ನೇ ನೀರಾವರಿ ಸಲಹಾ ಸಮಿತಿ ಸಭೆಯನ್ನು ಅಕ್ಟೋಬರ್ 19 ರಂದು ಬೆಳಗ್ಗೆ 10:30 ಗಂಟೆಗೆ ಕೊಠಡಿ ಸಂಖ್ಯೆ: 419, 4ನೇ ಮಹಡಿ, ವಿಕಾಸಸೌಧ, ಬೆಂಗಳೂರು ಇಲ್ಲಿ ಕರೆಯಲಾಗಿದೆ.

ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರೂ, ಸಮಿತಿಯ ಅಧ್ಯಕ್ಷರೂ ಆದ ಶಿವರಾಜ ಎಸ್. ತಂಗಡಗಿ ಅವರ ಅಧ್ಯಕ್ಷತೆಯಲ್ಲಿ ಸಭೆ ನಡೆಯಲಿದೆ.

ಸಂಬಧಪಟ್ಟ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿ ಅಮೂಲ್ಯ ಸಲಹೆ-ಸೂಚನೆಗಳನ್ನು ನೀಡುವಂತೆ ತುಂಗಭದ್ರಾ ಯೋಜನಾ ವೃತ್ತದ ಅಧೀಕ್ಷಕ ಅಭಿಯಂತರರು ಹಾಗೂ ಸಮಿತಿಯ ಸದಸ್ಯ ಕಾರ್ಯದರ್ಶಿ ಎಸ್. ಬಿ. ಮಲ್ಲಿಗವಾಡ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಅಮೃತ ವಾಣಿ**

**ಜಗತ್ತನ್ನು ಬೆಳಗಲು ಸೂರ್ಯ ಬೇಕು ಬದುಕನ್ನು ಬೆಳಗಲು ಪುಸ್ತಕ ಬೇಕು.**

**1618 ನೆಯ ದಿನಕ್ಕೆ ಏಮ್ಸ್ ಹೋರಾಟ**

ಅಖಿಲ ಭಾರತೀಯ ಆಯುರ್ವಿಜ್ಞಾನ ಸಂಸ್ಥಾನ ALL INDIA INSTITUTE OF MEDICAL SCIENCES शरीरमाद्यं खलु धर्मसाधनम्

## ಸ್ವಚ್ಛ ಸಂಕಲ್ಪ ಮಾಸ ಅಭಿಯಾನ: ಕಸದ ರಾಶಿ ತೆರವುಗೊಳಿಸಿ ಸಸಿ ನೆಟ್ಟು ಸೌಂದರ್ಯೀಕರಣ



ಲಿಂಗಸುಗೂರು: ಪಟ್ಟಣದ ಪುರಸಭೆ ವ್ಯಾಪ್ತಿಯ ಸ್ವಾಮಿ ವಿವೇಕಾನಂದ ನಗರದಲ್ಲಿರುವ ಜಿಲ್ಲಾ ಪಂಚಾಯಿತಿ ಕಚೇರಿ ಮುಂಭಾಗದಲ್ಲಿ ಸಂಗ್ರಹವಾಗಿದ್ದ ಕಸದ ರಾಶಿ ಹಾಗೂ ಚರಂಡಿಯ ತ್ಯಾಜ್ಯವನ್ನು ತೆರವುಗೊಳಿಸಿ, ಸ್ವಚ್ಛ ಸಂಕಲ್ಪ ಮಾಸ 2026ರ ಅಭಿಯಾನದ ಅಂಗವಾಗಿ ಸ್ವಚ್ಛತಾ ಕಾರ್ಯ ಕೈಗೊಳ್ಳಲಾಯಿತು.

ಪುರಸಭೆ ವತಿಯಿಂದ ಹಮ್ಮಿಕೊಂಡಿದ್ದ ಅಭಿಯಾನದಲ್ಲಿ ಜೆಸಿಬಿ ಯಂತ್ರ ಹಾಗೂ ಪೌರಕಾರ್ಮಿಕರ ನೆರವಿನಿಂದ ರಸ್ತೆ ಬದಿ ಮತ್ತು ಚರಂಡಿಗಳಲ್ಲಿ ಸಂಗ್ರಹವಾಗಿದ್ದ ಕಸವನ್ನು ತೆಗೆದು ಪರಿಸರವನ್ನು ಸ್ವಚ್ಛಗೊಳಿಸಲಾಯಿತು. ಬಳಿಕ ಸ್ವಚ್ಛಗೊಳಿಸಿದ ಸ್ಥಳದಲ್ಲಿ ರಂಗೋಲಿ ಬಿಡಿಸಿ, ವಿವಿಧ ಸಸಿಗಳನ್ನು ನೆಡುವ ಮೂಲಕ ಆ ಪ್ರದೇಶಕ್ಕೆ ಹೊಸ ರೂಪ ನೀಡಲಾಯಿತು.

ಸಾರ್ವಜನಿಕ ಸ್ಥಳಗಳಲ್ಲಿ ಎಲ್ಲೆಂದರಲ್ಲಿ ಕಸ ಎಸೆಯುವುದನ್ನು ತಡೆಗಟ್ಟುವುದು, ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವ ಬಗ್ಗೆ ನಾಗರಿಕರಲ್ಲಿ ಅರಿವು ಮೂಡಿಸುವುದು ಹಾಗೂ ಕಸ ಸಂಗ್ರಹವಾಗುತ್ತಿದ್ದ ಸ್ಥಳಗಳನ್ನು ಸುಂದರ ಪ್ರದೇಶಗಳನ್ನಾಗಿ ಪರಿವರ್ತಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಸ್ವಚ್ಛತೆ ಕೇವಲ ಪೌರಕಾರ್ಮಿಕರು ಅಥವಾ ಪುರಸಭೆಯ ಜವಾಬ್ದಾರಿಯಲ್ಲ. ಸಾರ್ವಜನಿಕರೂ ತಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಲು ಸಹಕರಿಸಬೇಕು ಎಂಬ ಸಂದೇಶವನ್ನು ಅಭಿಯಾನದ ಮೂಲಕ ಸಾರಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಅಧಿಕಾರಿ ಪ್ರಭು ಹುನಗುಂದ, ಪುರಸಭೆ ಪರಿಸರ ಅಭಿಯಂತೆ ಗಿರಿಜಾ, ನೈರ್ಮಲ್ಯ ನಿರೀಕ್ಷಕ ಗದ್ದೆಪ್ಪ ಕರಡಕಲ್, ಯುವ ಮುಖಂಡ ಶ್ರೀಕಾಂತ ಆಶಿಹಾಳ, ಸೌಮ್ಯ ವಸ್ತ್ರದ, ಗೀತಾ, ಮಾನಸದೇವಿ, ಅನ್ನಪೂರ್ಣ, ಶಶಿಕಲಾ ಸೇರಿದಂತೆ ಪುರಸಭೆ ಸಿಬ್ಬಂದಿ ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

## ಕೃಷಿ ಮಿತ್ರ ಯಂತ್ರ ಸೇವಾ ಕೇಂದ್ರದಲ್ಲಿ ಆಯುಧ ಪೂಜೆ, ವಾಹನ ಚಾಲಕರಿಗೆ ಸನ್ಮಾನ



ಮಾನ್ವಿ: ತಾಲೂಕಿನ ನೀರಮಾನ್ವಿ ಗ್ರಾಮದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್‌ನ ಕೃಷಿ ಮಿತ್ರ ಯಂತ್ರ ಸೇವಾ ಕೇಂದ್ರದಲ್ಲಿ ವಿಜಯದಶಮಿ ಹಬ್ಬದ ಅಂಗವಾಗಿ ಕೃಷಿ ಯಂತ್ರೋಪಕರಣಗಳಿಗೆ ವಿಶೇಷ ಆಯುಧ ಪೂಜೆ ನೆರವೇರಿಸಲಾಯಿತು. ಇದೇ ಸಂದರ್ಭದಲ್ಲಿ ಸೇವಾ ಕೇಂದ್ರದ ವಾಹನ ಚಾಲಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಸಿಎಚ್‌ಸಿ ಯೋಜನಾಧಿಕಾರಿ ಮಂಜುನಾಥ ಮಾತನಾಡಿ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಕೃಷಿ ಮಿತ್ರ ಯಂತ್ರ ಸೇವಾ ಕೇಂದ್ರವು ರೈತರಿಗೆ ಕೃಷಿ ಚಟುವಟಿಕೆಗಳಿಗೆ ಅಗತ್ಯವಿರುವ ಆಧುನಿಕ ಯಂತ್ರೋಪಕರಣಗಳು ಹಾಗೂ ತಾಂತ್ರಿಕ ಸೇವೆಗಳನ್ನು ಒದಗಿಸುವ ಮೂಲಕ ನೆರವಾಗುತ್ತಿದೆ. ಗುಣಮಟ್ಟದ ಯಂತ್ರೋಪಕರಣಗಳ ಸೇವೆಯನ್ನು ರೈತರಿಗೆ ತಲುಪಿಸುವ ನಿಟ್ಟಿನಲ್ಲಿ ಕೇಂದ್ರವು ಕಾರ್ಯನಿರ್ವಹಿಸುತ್ತಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ರಿಕವರಿ ಯೋಜನಾಧಿಕಾರಿ ಪಾತಲಿಂಗಪ್ಪ, ತಾಂತ್ರಿಕ ಅಭಿಯಂತರ ಸಂತೋಷ ಕುಮಾರ್, ಕೇಂದ್ರದ ಪ್ರಬಂಧಕ ಸಿದ್ದರಾಮಯ್ಯ, ತಾಲೂಕು ಕೃಷಿ ಮೇಲ್ವಿಚಾರಕ ಬಸವರಾಜ, ಗ್ರಾಮದ ಪ್ರಗತಿಪರ ರೈತರಾದ ಉಮಾಪತಿ, ಅಯ್ಯಪ್ಪ ನಾಯಕ, ಹನುಮಂತರೆಡ್ಡಿ, ಮಾಲಿ ವಿರೂಪಾಕ್ಷಪ್ಪ ಗೌಡ, ಭೀಮರಾಯ್, ಶಿವರಾಮ್ ಗೌಡ, ಕುರಿ ಯಲ್ಲಪ್ಪ, ಸಣ್ಣರಾಜ ಹಾಗೂ ಗ್ರಾಮದ ಮುಖಂಡರಾದ ಶ್ರೀರಾಮುಲು, ನಾಗರಾಜ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಕೃಷಿ ವಿವಿ ನೇಮಕಾತಿಯಲ್ಲಿ ಅಕ್ರಮ ಆರೋಪ: ತನಿಖೆಗೆ ಜೆಡಿಎಸ್ ಆಗ್ರಹ

ಅಕ್ರಮ ಆರೋಪಗಳಿಗೆ ಸಂಬಂಧಿಸಿದಂತೆ ಇಬ್ರಾಹಿಂ ಕಲೀಲ್ ತಂದೆ ರಾಜಾ ಸಾಬ್ ಎಂಬುವವರು ಕರ್ನಾಟಕ ಲೋಕಾಯುಕ್ತಕ್ಕೆ ದೂರು ಸಲ್ಲಿಸಿದ್ದಾರೆ ಎಂದು ವಿರೂಪಾಕ್ಷಿ ತಿಳಿಸಿದರು. ಸಹಾಯಕ ಪ್ರಾಧ್ಯಾಪಕರ ಪರೀಕ್ಷೆಗೆ ಹಾಜರಾಗದಿದ್ದರೂ ₹40 ಲಕ್ಷ ಮುಂಗಡವಾಗಿ ನೀಡಿದರೆ ನೇಮಕಾತಿ ಆದೇಶ ಕೊಡಿಸುವುದಾಗಿ ಹಾಗೂ ನಂತರ ₹10 ಲಕ್ಷ ನೀಡಬೇಕೆಂದು ಬೇಡಿಕೆ ಇಡಲಾಗಿತ್ತು ಎಂಬುದು ದೂರಿನಲ್ಲಿರುವ ಆರೋಪವಾಗಿದೆ. ಈ ಆರೋಪದ ಸತ್ಯಾಸತ್ಯತೆಯನ್ನು ತನಿಖಾ ಸಂಸ್ಥೆಗಳು ಪರಿಶೀಲಿಸಬೇಕು ಎಂದು ಒತ್ತಾಯಿಸಿದರು.

ಪ್ರಕರಣಕ್ಕೆ ಸಂಬಂಧಿಸಿದಂತೆ ಕುಲಪತಿ ಹನುಮಂತಪ್ಪ, ಆಡಳಿತ ಮಂಡಳಿಯ ಸದಸ್ಯ ಡಿ. ಮಲ್ಲಿಕಾರ್ಜುನ, ಡಾ. ರಾಜಣ್ಣ ಹಾಗೂ ಬೆಂಗಳೂರಿನ ಜಿಕೆವಿಕೆ ಪರೀಕ್ಷಾ ಕೇಂದ್ರದೊಂದಿಗೆ ಸಂಬಂಧ ಹೊಂದಿರುವ ಡಾ. ಸಿದ್ದಯ್ಯ ಅವರ ಪಾತ್ರದ ಬಗ್ಗೆಯೂ ತನಿಖೆ ನಡೆಸಬೇಕು. ನೇಮಕಾತಿ ಪ್ರಕ್ರಿಯೆಯಲ್ಲಿ ಅಧಿಕಾರ ದುರುಪಯೋಗವಾಗಿದೆಯೇ ಎಂಬುದನ್ನು ಪರಿಶೀಲಿಸಿ, ತಪ್ಪಿತಸ್ಥರು ಕಂಡುಬಂದಲ್ಲಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ನೇಮಕಾತಿಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳ ಸಂಪೂರ್ಣ ಪಟ್ಟಿ, ಅರ್ಹ ಮತ್ತು ಅನರ್ಹ ಅಭ್ಯರ್ಥಿಗಳ ವಿವರ, ಪರೀಕ್ಷಾ ಕೇಂದ್ರಗಳ ಹಂಚಿಕೆ ಹಾಗೂ ಬದಲಾವಣೆಗೆ ಸಂಬಂಧಿಸಿದ ಆದೇಶಗಳು, ಅಧಿಕಾರಿಗಳ ಶಿಫಾರಸು ಪತ್ರಗಳು, ಪರೀಕ್ಷಾ ಮೇಲ್ವಿಚಾರಕರ ಮಾಹಿತಿ, ಪ್ರಶ್ನೆಪತ್ರಿಕೆಗಳು, ಒಎಂಆರ್ ಉತ್ತರ ಪತ್ರಿಕೆಗಳು, ಹಾಜರಾತಿ ದಾಖಲೆಗಳು ಹಾಗೂ ಸಿಸಿಟಿವಿ ದೃಶ್ಯಾವಳಿಗಳನ್ನು ತನಿಖೆಗೆ ಒಳಪಡಿಸಬೇಕು ಎಂದು ಹೇಳಿದರು.

ಅಲ್ಲದೆ, ಅಭ್ಯರ್ಥಿಗಳ ಲಿಖಿತ ಪರೀಕ್ಷೆಯ ಅಂಕಗಳು, ಸಂದರ್ಶನದ ಅಂಕಪಟ್ಟಿ, ಸ್ಕೋರ್ ಕಾರ್ಡ್, ಆಯ್ಕೆ ಸಮಿತಿಯ ನಡಾವಳಿಗಳು, ಅಂತಿಮ ಆಯ್ಕೆ ಪಟ್ಟಿ, ನಿರೀಕ್ಷಣಾ ಪಟ್ಟಿ, ಪ್ರಮಾಣಪತ್ರ ಪರಿಶೀಲನೆ ದಾಖಲೆಗಳು, ನೇಮಕಾತಿ ಆದೇಶಗಳು ಹಾಗೂ ಆಡಳಿತ ಮಂಡಳಿ ಸಭೆಯ ನಿರ್ಣಯಗಳನ್ನು ಪರಿಶೀಲಿಸಬೇಕು. ಪ್ರತಿಯೊಬ್ಬ ಆಯ್ಕೆಯಾದ ಅಭ್ಯರ್ಥಿಯ ಅರ್ಹತೆ ಮತ್ತು ಪಡೆದ ಅಂಕಗಳ ಆಧಾರದಲ್ಲಿ ಆಯ್ಕೆ ಪ್ರಕ್ರಿಯೆ ಪಾರದರ್ಶಕವಾಗಿ ನಡೆದಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಒತ್ತಾಯಿಸಿದರು.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಸಾಮಾನ್ಯ ವರ್ಗ ಹಾಗೂ ವಿವಿಧ ಹಿಂದುಳಿದ ವರ್ಗಗಳ ಮೀಸಲಾತಿಯ ಜೊತೆಗೆ ಕಲ್ಯಾಣ ಕರ್ನಾಟಕ ಪ್ರದೇಶದ ಮೀಸಲಾತಿ, ಗ್ರಾಮೀಣ, ಮಹಿಳಾ, ಕನ್ನಡ ಮಾಧ್ಯಮ ಮತ್ತು ಅಂಗವಿಕಲ ಅಭ್ಯರ್ಥಿಗಳಿಗೆ ಅನ್ವಯವಾಗುವ ಸಮತಲ ಮೀಸಲಾತಿ ನಿಯಮಗಳನ್ನು ಸಮರ್ಪಕವಾಗಿ ಪಾಲಿಸಲಾಗಿದೆಯೇ ಎಂಬುದನ್ನೂ ತನಿಖೆ ನಡೆಸಬೇಕು. ಅರ್ಹ ಅಭ್ಯರ್ಥಿಗಳಿಗೆ ಅನ್ಯಾಯವಾಗಿದ್ದರೆ ಅದನ್ನು ಸರಿಪಡಿಸಿ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿದರು.

ಈ ನೇಮಕಾತಿ ಪ್ರಕ್ರಿಯೆಯಲ್ಲಿನ ಅಕ್ರಮಗಳ ಕುರಿತು ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಡಬ್ಲ್ಯು.ಪಿ. ಸಂಖ್ಯೆ 4019/2026 (GM-RES-PIL) ಅಡಿಯಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಲಾಗಿದೆ ಎಂದು ತಿಳಿಸಿದ ಅವರು, ಪ್ರಕರಣ ನ್ಯಾಯಾಂಗದ ಗಮನಕ್ಕೂ ಬಂದಿರುವ ಹಿನ್ನೆಲೆಯಲ್ಲಿ ಸರ್ಕಾರ ಗಂಭೀರವಾಗಿ ಪರಿಗಣಿಸಿ ತನಿಖೆಗೆ ಮುಂದಾಗಬೇಕು ಎಂದರು.

ಆರೋಪಗಳಿಗೆ ಸಂಬಂಧಿಸಿದ ಅಧಿಕಾರಿಗಳು ವಿಶ್ವವಿದ್ಯಾಲಯದ ಉನ್ನತ ಹುದ್ದೆಗಳಲ್ಲಿ ಹಾಗೂ ಆಡಳಿತ ವ್ಯವಸ್ಥೆಯಲ್ಲಿ ಪ್ರಭಾವ ಹೊಂದಿರುವುದರಿಂದ ತನಿಖೆಯ ಮೇಲೆ ಯಾವುದೇ ಒತ್ತಡ ಉಂಟಾಗದಂತೆ ಕ್ರಮ ಕೈಗೊಳ್ಳಬೇಕು. ಅಗತ್ಯವಿದ್ದರೆ ಸಂಬಂಧಪಟ್ಟ ಅಧಿಕಾರಿಗಳನ್ನು ತನಿಖೆ ಪೂರ್ಣಗೊಳ್ಳುವವರೆಗೆ ಕರ್ತವ್ಯದಿಂದ ದೂರವಿಟ್ಟು, ದಾಖಲೆಗಳನ್ನು ಸುರಕ್ಷಿತವಾಗಿ ವಶಕ್ಕೆ ಪಡೆಯಬೇಕು ಎಂದು ಒತ್ತಾಯಿಸಿದರು.

ಕರ್ನಾಟಕ ಲೋಕಾಯುಕ್ತ, ಸ್ವತಂತ್ರ ಉನ್ನತ ಮಟ್ಟದ ತನಿಖಾ ಸಂಸ್ಥೆ ಅಥವಾ ನಿವೃತ್ತ ನ್ಯಾಯಮೂರ್ತಿಗಳ ನೇತೃತ್ವದಲ್ಲಿ ಸಮಗ್ರ ತನಿಖೆ ನಡೆಸಬೇಕು. ಆರೋಪಗಳು ಸಾಬೀತಾದಲ್ಲಿ ಸಂಬಂಧಪಟ್ಟವರ ವಿರುದ್ಧ ಭ್ರಷ್ಟಾಚಾರ ತಡೆ ಕಾಯ್ದೆಯಡಿ ಕ್ರಿಮಿನಲ್ ಪ್ರಕರಣ ದಾಖಲಿಸಿ, ನಿಯಮಬಾಹಿರ ನೇಮಕಾತಿಗಳನ್ನು ರದ್ದುಗೊಳಿಸಬೇಕು. ಅರ್ಹತೆ ಮತ್ತು ಪ್ರತಿಭೆಯ ಆಧಾರದಲ್ಲಿ ಉದ್ಯೋಗದ ನಿರೀಕ್ಷೆಯಲ್ಲಿರುವ ಅಭ್ಯರ್ಥಿಗಳಿಗೆ ಅನ್ಯಾಯವಾಗದಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ವಿರೂಪಾಕ್ಷಿ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಜೆಡಿಎಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಮಕೃಷ್ಣ, ವಿಕ್ರಂ ಗೋಸ್ವಾಮಿ, ಆದಿ ರೈ, ಎ. ರಾಮು, ಶರಣಪ್ಪಗೌಡ ಸೇರಿದಂತೆ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

ಮೊದಲನೇ ಪುಟದಿಂದ

## ಲೆಹ್ರಾ ದೋ ತಿರಂಗಾ ಪ್ರತಿಭಟನೆಗೆ ತೆರಳುತ್ತಿದ್ದ ಅಭಿಜೀತ್ ದೀಪ್ಕೆ ಪೊಲೀಸರ ವಶಕ್ಕೆ

ಮುಖಂಡರಾದ ಸೌರವ್ ದಾಸ್ ಮತ್ತು ಅಶುತೋಷ್ ರಾಂಕಾ ಅವರನ್ನು ಈ ಹಿಂದೆ ವಶಕ್ಕೆ ಪಡೆದಿರುವ ಪ್ರಕರಣವೂ ಹಿನ್ನೆಲೆಯಾಗಿದೆ. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಒತ್ತಾಯಿಸಿ ವಿದ್ಯಾರ್ಥಿ ಹಾಗೂ ಎಡಪಂಥೀಯ ಸಂಘಟನೆಗಳೂ ಪ್ರತಿಭಟನೆಯಲ್ಲಿ ಭಾಗವಹಿಸಿದ್ದವು.

ಶುಕ್ರವಾರ ಸಂಜೆ ವೇಳೆಗೆ ಕನ್ನಾಟ್ ಪ್ಲೇಸ್ ಮತ್ತು ಮಂಡಿ ಹೌಸ್ ಸೇರಿದಂತೆ ಮಧ್ಯ ದೆಹಲಿಯ ವಿವಿಧ ಪ್ರದೇಶಗಳಲ್ಲಿ ನಡೆದ ಪ್ರತಿಭಟನೆಗಳ ಸಂದರ್ಭದಲ್ಲಿ ಅಭಿಜೀತ್ ದೀಪ್ಕೆ, ನೇಹಾ ಬೋರಾ ಸೇರಿದಂತೆ 150ಕ್ಕೂ ಹೆಚ್ಚು ಮಂದಿಯನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ ಎಂದು ಪಿಟಿಐ ವರದಿ ತಿಳಿಸಿದೆ. ಪ್ರತಿಭಟನಾಕಾರರನ್ನು ಚದುರಿಸುವ ವೇಳೆ ಕೆಲವು ಸ್ಥಳಗಳಲ್ಲಿ ಪೊಲೀಸರು ಮತ್ತು ಪ್ರತಿಭಟನಾಕಾರರ ನಡುವೆ ತಳ್ಳಾಟವೂ ನಡೆದಿದೆ.

ಪೊಲೀಸರ ನಿರ್ಬಂಧದ ನಡುವೆಯೂ ರಾಷ್ಟ್ರಧ್ವಜ ಹಿಡಿದು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದ ಕಾರ್ಯಕರ್ತರು ತಮ್ಮ ಬೇಡಿಕೆಗಳನ್ನು ಮುಂದಿಟ್ಟರು. ಈ ಬೆಳವಣಿಗೆಯಿಂದ ದೆಹಲಿಯಲ್ಲಿ ಪ್ರತಿಭಟನೆ ನಡೆಸುವ ಹಕ್ಕು, ಸಾರ್ವಜನಿಕ ಸುರಕ್ಷತೆ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವ ಆಡಳಿತದ ಜವಾಬ್ದಾರಿಯ ಕುರಿತು ಮತ್ತೊಮ್ಮೆ ಚರ್ಚೆ ಮುನ್ನೆಲೆಗೆ ಬಂದಿದೆ.

## ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಶರಣಪ್ಪ ಮಟ್ಟೂರು ಬೆಂಬಲಿಸಲು ಎ. ವಸಂತಕುಮಾರ ಮನವಿ

ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಸರ್ಕಾರ ನಿರಂತರವಾಗಿ ಶ್ರಮಿಸುತ್ತಿದೆ ಎಂದು ಹೇಳಿದರು.

ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಅವರು ಈ ಹಿಂದೆ ಒಂದು ಅವಧಿಗೆ ವಿಧಾನ ಪರಿಷತ್ ಸದಸ್ಯರಾಗಿ ಕಾರ್ಯನಿರ್ವಹಿಸಿದ್ದು, ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಅವರ ಹಿತಾಸಕ್ತಿಗಳ ಪರವಾಗಿ ಪರಿಣಾಮಕಾರಿಯಾಗಿ ಕೆಲಸ ಮಾಡಿದ್ದಾರೆ. ಶಿಕ್ಷಕರ ಬೇಡಿಕೆಗಳನ್ನು ಸರ್ಕಾರದ ಮಟ್ಟದಲ್ಲಿ ಪ್ರಸ್ತಾಪಿಸಿ ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸಿದ್ದಾರೆ. ಮುಂದಿನ ದಿನಗಳಲ್ಲಿ ಶಿಕ್ಷಕರ ಪರವಾಗಿ ಇನ್ನಷ್ಟು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಅವರಿಗೆ ಮತ್ತೊಂದು ಅವಕಾಶ ನೀಡಬೇಕು ಎಂದು ಮನವಿ ಮಾಡಿದರು.

ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರು ಶರಣಪ್ಪ ಮಟ್ಟೂರು ಅವರ ಹಿಂದಿನ ಸೇವೆ ಹಾಗೂ ಶಿಕ್ಷಕರ ಪರವಾದ ಬದ್ಧತೆಯನ್ನು ಪರಿಗಣಿಸಿ, ಪ್ರಥಮ ಪ್ರಾಶಸ್ತ್ಯದ ಮತ ನೀಡಿ ಗೆಲ್ಲಿಸಬೇಕೆಂದು ಎ. ವಸಂತಕುಮಾರ ಕೋರಿದರು.

ಈ ಸಂದರ್ಭದಲ್ಲಿ ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಅಬ್ದುಲ್ ಕರೀಂ, ಮಹಾನಗರ ಪಾಲಿಕೆ ಮಾಜಿ ಸದಸ್ಯ ಬಸವರಾಜ ದರೂರು, ಜಿಲ್ಲಾ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ರಾಮಕೃಷ್ಣ ನಾಯಕ, ಕೆಪಿಸಿಸಿ ವಕ್ತಾರ ಡಾ. ರಝಾಕ್ ಉಸ್ತಾದ್, ವಿಶ್ವವಿದ್ಯಾಲಯದ ವಿದ್ಯಾವಿಷಯಕ ಪರಿಷತ್ ಸದಸ್ಯ ರಮೇಶ ರೋಸ್ಲಿ ಸೇರಿದಂತೆ ಕಾಂಗ್ರೆಸ್ ಮುಖಂಡರು ಹಾಗೂ ಇತರರು ಉಪಸ್ಥಿತರಿದ್ದರು.

## ಸ್ಟಿಂಗ್ ಆಪರೇಷನ್ ತನಿಖೆಯಲ್ಲಿ ಅಧಿಕಾರ ದುರ್ಬಳಕೆ ಆರೋಪ: ಪ್ರಿಯಾಂಕ್ ಖರ್ಗೆ ವಿರುದ್ಧ ಕುಮಾರಸ್ವಾಮಿ ವಾಗ್ದಾಳಿ

ಲಭ್ಯವಿವೆ. ಅಧಿಕಾರಿಗಳಿಗೆ ಬೆದರಿಕೆ ಹಾಕುವ ಉದ್ದೇಶದಿಂದ ಅಲ್ಲಿಗೆ ಹೋಗಿರಲಿಲ್ಲ. ಪ್ರಕರಣದ ಹಿಂದಿರುವ ವ್ಯಕ್ತಿಗಳನ್ನು ಪತ್ತೆಹಚ್ಚಿ ಕಾನೂನು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದೇನೆ. ಪೊಲೀಸ್ ಆಯುಕ್ತರು ತನಿಖೆಗೆ ಕಾಲಾವಕಾಶ ಕೇಳಿದ್ದಾರೆ ಎಂದು ತಿಳಿಸಿದರು.

ಪ್ರಕರಣದ ತನಿಖೆಯಲ್ಲಿ ಯಾರ ಹೆಸರು ಕೇಳಿಬಂದರೂ, ಅನುಮಾನ ವ್ಯಕ್ತವಾದರೆ ಕೇಂದ್ರ ಸಚಿವರಾಗಿದ್ದರೂ ವಿಚಾರಣೆ ನಡೆಸಲಾಗುವುದು ಎಂದು ಪ್ರಿಯಾಂಕ್ ಖರ್ಗೆ ನೀಡಿದ್ದ ಹೇಳಿಕೆಗೆ ಕುಮಾರಸ್ವಾಮಿ ಆಕ್ಷೇಪ ವ್ಯಕ್ತಪಡಿಸಿದರು. ತನಿಖೆ ನಡೆಸುವುದಕ್ಕೆ ತಮ್ಮ ವಿರೋಧವಿಲ್ಲ. ಆದರೆ ತನಿಖೆಯ ನೆಪದಲ್ಲಿ ರಾಜಕೀಯ ವಿರೋಧಿಗಳನ್ನು ಗುರಿಯಾಗಿಸಿಕೊಳ್ಳಬಾರದು ಎಂದು ಹೇಳಿದರು.

ಸಿದ್ದರಾಮಯ್ಯ ವಿರುದ್ಧದ ಸ್ಟಿಂಗ್ ಆಪರೇಷನ್ ವಿಡಿಯೋ ಪ್ರಕರಣವು ಕಾಂಗ್ರೆಸ್ ಪಕ್ಷದೊಳಗಿನ ಆಂತರಿಕ ಭಿನ್ನಾಭಿಪ್ರಾಯಗಳ ಪರಿಣಾಮವಾಗಿರಬಹುದು ಎಂದು ಕುಮಾರಸ್ವಾಮಿ ಶಂಕೆ ವ್ಯಕ್ತಪಡಿಸಿದರು. ವಿಡಿಯೋ ಸಿದ್ಧಪಡಿಸಿದವರನ್ನು ಪತ್ತೆಹಚ್ಚುವ ಬದಲು ಅದನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡಿದ್ದಾರೆ ಎಂಬ ಕಾರಣಕ್ಕೆ ಇಬ್ಬರು ಜೆಡಿಎಸ್ ಕಾರ್ಯಕರ್ತರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿರುವುದು ಸರಿಯಲ್ಲ ಎಂದು ಆಕ್ಷೇಪಿಸಿದರು.

ವಿಡಿಯೋ ತಯಾರಿಸಿದವರು ಯಾರು, ಅದರ ಹಿಂದಿರುವ ಉದ್ದೇಶವೇನು ಎಂಬುದನ್ನು ಮೊದಲು ಪತ್ತೆಹಚ್ಚಬೇಕು. ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಹಂಚಿಕೊಂಡ ಯುವಕರನ್ನು ಯಾವ ಆಧಾರದ ಮೇಲೆ ಶಂಕಿತರೆಂದು ಪರಿಗಣಿಸಲಾಗಿದೆ ಎಂಬುದನ್ನು ಪೊಲೀಸರು ಸ್ಪಷ್ಟಪಡಿಸಬೇಕು. ನಿಜವಾದ ಆರೋಪಿಗಳನ್ನು ರಕ್ಷಿಸಿ, ಪಕ್ಷದ ಕಾರ್ಯಕರ್ತರನ್ನು ಗುರಿಯಾಗಿಸಲಾಗುತ್ತಿದೆ ಎಂಬ ಅನುಮಾನ ಮೂಡುತ್ತಿದೆ ಎಂದು ಆರೋಪಿಸಿದರು.

ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ ಜೆಡಿಎಸ್ ಕಾರ್ಯಕರ್ತರೊಂದಿಗೆ ಪೊಲೀಸ್ ಆಯುಕ್ತರ ಕಚೇರಿ ಎದುರು ಪ್ರತಿಭಟನೆ ನಡೆಸಿದ್ದ ಕುಮಾರಸ್ವಾಮಿ, ತನಿಖೆಯಲ್ಲಿ ರಾಜಕೀಯ ಹಸ್ತಕ್ಷೇಪಕ್ಕೆ ಅವಕಾಶ ನೀಡಬಾರದು ಎಂದು ಒತ್ತಾಯಿಸಿದ್ದರು. ಮತ್ತೊಂದೆಡೆ, ಸಿದ್ದರಾಮಯ್ಯ ಅವರ ವಿರುದ್ಧ ಮಾನಹಾನಿಕರ ವಿಷಯಗಳನ್ನು ಸಾಮಾಜಿಕ ಮಾಧ್ಯಮಗಳಲ್ಲಿ ಪ್ರಕಟಿಸುವುದು ಅಥವಾ ಪ್ರಸಾರ ಮಾಡುವುದನ್ನು ತಡೆಯುವಂತೆ ನ್ಯಾಯಾಲಯದಿಂದ ತಡೆಯಾಜ್ಞೆ ಪಡೆಯಲಾಗಿದೆ.

ಕುಮಾರಸ್ವಾಮಿ ಆರೋಪಗಳಿಗೆ ಪ್ರತಿಕ್ರಿಯಿಸಿದ್ದ ಪ್ರಿಯಾಂಕ್ ಖರ್ಗೆ, ಪೊಲೀಸರು ಕಾನೂನು ಪ್ರಕಾರ ತನಿಖೆ ನಡೆಸುತ್ತಿದ್ದಾರೆ. ಪ್ರಕರಣದಲ್ಲಿ ಹೆಸರು ಕೇಳಿಬಂದವರನ್ನು ವಿಚಾರಣೆಗೆ ಒಳಪಡಿಸಲಾಗುತ್ತಿದ್ದು, ಈವರೆಗೆ ಯಾರನ್ನೂ ಬಂಧಿಸಿಲ್ಲ ಎಂದು ಗುರುವಾರ ತಿಳಿಸಿದ್ದರು.

ಕುಮಾರಸ್ವಾಮಿ ಅವರ ಬಳಿ ಪ್ರಕರಣಕ್ಕೆ ಸಂಬಂಧಿಸಿದ ಯಾವುದೇ ಸಾಕ್ಷ್ಯಾಧಾರಗಳಿದ್ದರೆ ಅವುಗಳನ್ನು ಪೊಲೀಸ್ ಇಲಾಖೆ ಅಥವಾ ನ್ಯಾಯಾಲಯಕ್ಕೆ ಸಲ್ಲಿಸಬೇಕು. ಸಾರ್ವಜನಿಕವಾಗಿ ಆರೋಪ ಮಾಡುವುದರಿಂದ ತನಿಖೆಗೆ ಸಹಕಾರ ದೊರೆಯುವುದಿಲ್ಲ ಎಂದು ಹೇಳಿದ್ದರು.

ಮೊದಲು ತನಿಖೆ ನಡೆಸುವಂತೆ ಒತ್ತಾಯಿಸಿದ್ದ ಕುಮಾರಸ್ವಾಮಿ, ಈಗ ಪೊಲೀಸರು ವಿಚಾರಣೆ ಆರಂಭಿಸಿದಾಗ ಆಕ್ಷೇಪ ವ್ಯಕ್ತಪಡಿಸುತ್ತಿದ್ದಾರೆ. ತನಿಖಾಧಿಕಾರಿಗಳು ತಮ್ಮ ಕರ್ತವ್ಯ ನಿರ್ವಹಿಸಲು ಅವಕಾಶ ನೀಡಬೇಕು. ತನಿಖೆಯಲ್ಲಿ ಯಾರ ವಿರುದ್ಧವಾದರೂ ಸಾಕ್ಷ್ಯಗಳು ದೊರೆತರೆ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುವುದು ಎಂದು ಖರ್ಗೆ ಪ್ರತಿಪಾದಿಸಿದ್ದರು. ಕುಮಾರಸ್ವಾಮಿ ವಿರುದ್ಧವೂ ಅಪರಾಧಕ್ಕೆ ಸಂಬಂಧಿಸಿದ ಸಾಕ್ಷ್ಯಗಳು ದೊರೆತರೆ ಬಂಧನ ಸೇರಿದಂತೆ ಅಗತ್ಯ ಕಾನೂನು ಕ್ರಮ ಕೈಗೊಳ್ಳಬಹುದು ಎಂದು ಹೇಳಿದ್ದರು.

ಇದೇ ವೇಳೆ ರಾಜ್ಯ ಸರ್ಕಾರದ ವಿರುದ್ಧ ಮತ್ತಷ್ಟು ಆರೋಪಗಳನ್ನು ಮಾಡಿದ ಕುಮಾರಸ್ವಾಮಿ, ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ನಡೆದ 24 ಎಂಜಿನಿಯರ್‌ಗಳ ನೇಮಕಾತಿಯಲ್ಲಿ ಅಕ್ರಮ ನಡೆದಿದೆ ಎಂದು ದೂರಿದರು. ಈ ಪೈಕಿ 10 ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆಯಲ್ಲಿ ಲೋಪದೋಷಗಳಿರುವುದನ್ನು ತನಿಖೆಯಲ್ಲಿ ಗುರುತಿಸಿ ನೇಮಕಾತಿ ರದ್ದತಿಗೆ ಶಿಫಾರಸು ಮಾಡಿದ್ದರೂ ಸರ್ಕಾರ ನೇಮಕಾತಿ ಪ್ರಕ್ರಿಯೆಯನ್ನು ಮುಂದುವರಿಸಿದೆ ಎಂದು ಆರೋಪಿಸಿದರು.

ಪಶುವೈದ್ಯಾಧಿಕಾರಿಗಳ ನೇಮಕಾತಿಯಲ್ಲಿಯೂ ವ್ಯಾಪಕ ಅಕ್ರಮಗಳು ನಡೆದಿವೆ ಎಂದು ಆರೋಪಿಸಿದ ಅವರು, ನ್ಯಾಯಾಲಯದ ನಿರ್ದೇಶನದಂತೆ ತನಿಖೆ ನಡೆಸುವ ಕ್ರಮಗಳಿಗೆ ಸರ್ಕಾರ ವಿರೋಧ ವ್ಯಕ್ತಪಡಿಸುತ್ತಿರುವುದೇಕೆ ಎಂದು ಪ್ರಶ್ನಿಸಿದರು. ಈ ನೇಮಕಾತಿ ಅಕ್ರಮಗಳ ಕುರಿತ ಆರೋಪಗಳಿಗೆ ಸ್ವತಂತ್ರ ದೃಢೀಕರಣ ಲಭ್ಯವಾಗಿಲ್ಲ.

ಕೇಂದ್ರ ಸಚಿವರಾಗಿ ತಮ್ಮ ಇಲಾಖೆಯ ಕಾರ್ಯನಿರ್ವಹಣೆ ಕುರಿತು ಮಾತನಾಡಿದ ಕುಮಾರಸ್ವಾಮಿ, ಭಾರತ್ ಹೆವಿ ಎಲೆಕ್ಟ್ರಿಕಲ್ಸ್ ಲಿಮಿಟೆಡ್ (ಬಿಎಚ್‌ಇಎಲ್) ಸಂಸ್ಥೆಯ ಲಾಭವು ತಮ್ಮ ಅಧಿಕಾರಾವಧಿಯಲ್ಲಿ ₹200 ಕೋಟಿಯಿಂದ ₹1,500 ಕೋಟಿಗೂ ಅಧಿಕ ಮಟ್ಟಕ್ಕೆ ಏರಿಕೆಯಾಗಿದೆ ಎಂದು ತಿಳಿಸಿದರು.

ಸ್ಟೀಲ್ ಅಥಾರಿಟಿ ಆಫ್ ಇಂಡಿಯಾ (ಎಸ್‌ಎಐಎಲ್) ಸಂಸ್ಥೆಯೂ ₹3,500 ಕೋಟಿ ಲಾಭದತ್ತ ಸಾಗುತ್ತಿದೆ. ಮುಂದಿನ ವರ್ಷಕ್ಕೆ ₹10,000 ಕೋಟಿ ಲಾಭ ಗಳಿಸುವ ಗುರಿ ಹೊಂದಲಾಗಿದೆ ಎಂದು ಹೇಳಿದರು.

ಸ್ಟಿಂಗ್ ಆಪರೇಷನ್ ವಿಡಿಯೋ ಪ್ರಕರಣದ ತನಿಖೆ ಕುರಿತು ಕುಮಾರಸ್ವಾಮಿ ಮತ್ತು ಪ್ರಿಯಾಂಕ್ ಖರ್ಗೆ ನಡುವೆ ಆರೋಪಪ್ರತ್ಯಾರೋಪ ಮುಂದುವರಿದಿದ್ದು, ತನಿಖೆಯಿಂದ ಹೊರಬರುವ ಅಂಶಗಳು ಪ್ರಕರಣದ ಮುಂದಿನ ಬೆಳವಣಿಗೆಗೆ ಮಹತ್ವ ಪಡೆದಿವೆ.

## ಸಿಬ್ಬಂದಿಗಳು ಸ್ವಚ್ಛತೆಗೆ ಆದ್ಯತೆ ನೀಡಿ: ಸಹಾಯಕ ಆಯುಕ್ತ ಡಾ. ಹಂಪಣ್ಣ

ನಿಲಯಗಳ ಸಿಬ್ಬಂದಿಗೆ ಯಾವುದೇ ಸಮಸ್ಯೆಗಳಿದ್ದರೂ ನಿಲಯ ಪಾಲಕರು ಹಾಗೂ ತಾಲೂಕು ಮಟ್ಟದ ಅಧಿಕಾರಿಗಳ ಗಮನಕ್ಕೆ ತಂದು ನಿವಾರಿಸಿಕೊಳ್ಳಲು ಅವಕಾಶವಿದೆ. ಮೂರು ದಿನಗಳ ತರಬೇತಿಯ ಮುಖ್ಯ ಉದ್ದೇಶವೆಂದರೆ ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಮತ್ತು ಸ್ವಚ್ಛವಾದ ಊಟವನ್ನು ಒದಗಿಸುವುದಾಗಿದೆ. ತರಬೇತಿ ಪಡೆದ ಬಳಿಕವೂ ನಿಯಮಗಳನ್ನು ಪಾಲಿಸದೆ ಲೋಪದೋಷಗಳು ಕಂಡುಬಂದಲ್ಲಿ ನೇರವಾಗಿ ಶಿಸ್ತು ಕ್ರಮ ಕೈಗೊಳ್ಳಲಾಗುತ್ತದೆ. ಹಾಸ್ಟೆಲ್‌ಗಳಲ್ಲಿ ಗುಣಮಟ್ಟದ ಆಹಾರ ಮತ್ತು ಉತ್ತಮ ನಿರ್ವಹಣೆಗಾಗಿ ಅಧಿಕಾರಿಗಳು ನೀಡಿರುವ ಈ ಕಟ್ಟುನಿಟ್ಟಿನ ಸೂಚನೆಗಳನ್ನು ಎಲ್ಲ ಸಿಬ್ಬಂದಿ ಕಡ್ಡಾಯವಾಗಿ ಪಾಲಿಸಬೇಕಿದೆ ಎಂದರು.

ಈ ವೇಳೆ ಜಿಲ್ಲಾ ಪಂಚಾಯತ್ ಯೋಜನಾಧಿಕಾರಿ ಶರಣಬಸವ ಅವರು ಮಾತನಾಡಿ, ವಿದ್ಯಾರ್ಥಿ ನಿಲಯಗಳಲ್ಲಿ ಊಟ ತಯಾರಿಸುವಾಗ ಹಾಗೂ ವಿತರಿಸುವಾಗ ನಿರ್ಲಕ್ಷ್ಯ ತೋರಲಾಗುತ್ತಿದ್ದು, ನಿಗದಿತ ವೇಳೆಗೆ ಊಟ ಸಿಗದೆ ಮಕ್ಕಳಿಗೆ ತೊಂದರೆಯಾಗುತ್ತದೆ ಎಂಬ ದೂರುಗಳು ಬಂದಿದ್ದು, ಅಡುಗೆ ಮನೆ ಹಾಗೂ ಹಾಸ್ಟೆಲ್ ಆವರಣದಲ್ಲಿ ನೈರ್ಮಲ್ಯ ಮತ್ತು ಸ್ವಚ್ಛತೆಯನ್ನು ಕಾಪಾಡಬೇಕು. ಯಾವುದೇ ಕಾರಣಕ್ಕೂ ಅಡುಗೆ ಸಿಬ್ಬಂದಿ ಅಥವಾ ವಾರ್ಡನ್‌ಗಳು ಕರ್ತವ್ಯದಲ್ಲಿ ಬೇಜವಾಬ್ದಾರಿ ತೋರಬಾರದು. ಅಲ್ಲದೆ, ಕೆಲವು ತಪ್ಪುಗಳು ಮರುಕಳಿಸಿದರೆ ಕಠಿಣ ಕ್ರಮ ಎದುರಿಸಬೇಕಾಗುತ್ತದೆ ಎಂದರು.

ಮಕ್ಕಳ ಆರೋಗ್ಯ ಮತ್ತು ಸುರಕ್ಷತೆಯ ಹಿತದೃಷ್ಟಿಯಿಂದ ಹಾಸ್ಟೆಲ್‌ಗಳಲ್ಲಿ ಗುಣಮಟ್ಟದ ಆಹಾರ ಹಾಗೂ ಕಟ್ಟುನಿಟ್ಟಿನ ಸ್ವಚ್ಛತೆಯನ್ನು ಕಾಪಾಡುವಂತೆ ಹೇಳಿದರು.

ಇದಕ್ಕೂ ಮುಂಚೆ ಸಂವಿಧಾನ ಶಿಲ್ಪಿ ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಬಾಬು ಜಗಜೀವನ್ ರಾಮ್ ಅವರ ಭಾವಚಿತ್ರಗಳಿಗೆ ವಿವಿಧ ಗಣ್ಯರಿಂದ ಮಾಲಾರ್ಪಣೆ ಮಾಡಲಾಯಿತು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ. ನಂದಿತಾ ಎಂ.ಎನ್., ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಕೃಷ್ಣ ಶಾವಂತಗೇರ, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶಿವಮಾನಪ್ಪ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರವೀಣ್ ಕುಮಾರ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನೀತಾ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ವ್ಯವಸ್ಥಾಪಕ ತಿಮ್ಮರೆಡ್ಡಿ ಸೇರಿದಂತೆ ವಿವಿಧ ವಸತಿ ಶಾಲೆಗಳ ಪ್ರಾಂಶುಪಾಲರು, ನಿಲಯ ಪಾಲಕರು, ಅಡುಗೆ ಸಿಬ್ಬಂದಿಗಳು, ಸಹಾಯಕರು ಇದ್ದರು.

## ಓಂಕಾರ ರೂಪದ ಬನ್ನಿ ಮಂಟಪಕ್ಕೆ ಭಕ್ತರ ದರ್ಶನ: ಮಳೆಗಾಗಿ ಮಹಿಳೆಯರಿಂದ ವಿಶೇಷ ಪ್ರಾರ್ಥನೆ



ರಾಯಚೂರು: ನಗರದ ಬೃಹಸ್ಪತಿವಾರಪೇಟೆಯ ಶ್ರೀ ವೀರಭದ್ರೇಶ್ವರ ದೇವಸ್ಥಾನದ ಆವರಣದಲ್ಲಿ ಬೆಳೆದಿರುವ ಓಂಕಾರ ರೂಪದ ಬನ್ನಿ ಮಂಟಪವು ಭಕ್ತರ ಗಮನ ಸೆಳೆಯುತ್ತಿದ್ದು, ಇದರ ದರ್ಶನಕ್ಕಾಗಿ ಪ್ರತಿನಿತ್ಯ ನೂರಾರು ಮಹಿಳೆಯರು ಹಾಗೂ ಪುರುಷರು ದೇವಸ್ಥಾನಕ್ಕೆ ಆಗಮಿಸುತ್ತಿದ್ದಾರೆ.

ಶರನ್ನವರಾತ್ರಿ ಮಹೋತ್ಸವದ ಆರನೇ ದಿನದ ಅಂಗವಾಗಿ ದೇವಸ್ಥಾನದಲ್ಲಿ ವಿಶೇಷ ಪೂಜಾ ಕಾರ್ಯಕ್ರಮಗಳು ಶ್ರದ್ಧಾಭಕ್ತಿಯಿಂದ ಜರುಗಿದವು. ಈ ಸಂದರ್ಭದಲ್ಲಿ ಮಹಿಳೆಯರು ನಾಡಿನ ಸಮೃದ್ಧಿ, ಹಸಿರು ಹಾಗೂ ಅಭಿವೃದ್ಧಿಯ ಸಂಕೇತವಾಗಿ ಹಸಿರು ಬಣ್ಣದ ಉಡುಪುಗಳನ್ನು ಧರಿಸಿ, ಜಗನ್ಮಾತೆ ಅಂಬಾಭವಾನಿಗೆ ಹಸಿರು ಆರತಿ ಬೆಳಗುವ ಮೂಲಕ ವಿಶೇಷ ಪೂಜೆ ಸಲ್ಲಿಸಿದರು.

ಮಳೆಯ ಕೊರತೆಯಿಂದ ಸಂಕಷ್ಟಕ್ಕೆ ಸಿಲುಕಿರುವ ರೈತರ ಬದುಕು ಹಸನಾಗಲಿ, ಉತ್ತಮ ಮಳೆಯಾಗಿ ನಾಡಿನೆಲ್ಲೆಡೆ ಬೆಳೆಗಳು ಸಮೃದ್ಧಿಯಾಗಿ ಬೆಳೆಯಲಿ ಎಂದು ಮಹಿಳೆಯರು ದೇವಿಯಲ್ಲಿ ಪ್ರಾರ್ಥಿಸಿದರು.

ಮುಂಗಾರಿನಲ್ಲಿ ಸಮರ್ಪಕ ಮಳೆಯಾಗದೆ ರೈತರು ಬೆಳೆದ ಬೆಳೆಗಳು ಒಣಗುತ್ತಿದ್ದು, ರೈತರು ಆಕಾಶದತ್ತ ಮುಖಮಾಡಿ ಮಳೆಗಾಗಿ ಕಾಯುವಂತಾಗಿದೆ. ಹಿಂಗಾರು ಹಂಗಾಮಿನಲ್ಲಾದರೂ ಉತ್ತಮ ಮಳೆಯಾಗಿ ಭೂಮಿ ತಂಪಾಗಬೇಕು. ಅನ್ನದಾತರ ಸಂಕಷ್ಟ ದೂರವಾಗಿ ಅವರ ಕುಟುಂಬಗಳಲ್ಲಿ ನೆಮ್ಮದಿ ನೆಲೆಸಬೇಕು ಎಂದು ಭಕ್ತರು ಬೇಡಿಕೊಂಡರು.

ಮನುಷ್ಯರು ತಿಳಿದೋ ತಿಳಿಯದೆಯೋ ಮಾಡಿದ ತಪ್ಪುಗಳನ್ನು ಕ್ಷಮಿಸಿ, ವರುಣ ದೇವನ ಕೃಪೆಯಿಂದ ಧರೆಗೆ ಉತ್ತಮ ಮಳೆ ಸುರಿಯುವಂತೆ ಮಾಡಬೇಕು. ರೈತರ ಬದುಕಿನಲ್ಲಿ ಸಂತಸ ಮೂಡಿಸಿ, ಪ್ರತಿಯೊಂದು ಕುಟುಂಬಕ್ಕೂ ಸುಖ, ಶಾಂತಿ, ಆರೋಗ್ಯ, ನೆಮ್ಮದಿ ಹಾಗೂ ಸಮೃದ್ಧಿಯನ್ನು ಕರುಣಿಸಬೇಕು ಎಂದು ಮಹಿಳೆಯರು ಭಕ್ತಿಪೂರ್ವಕವಾಗಿ ಪ್ರಾರ್ಥಿಸಿದರು.

ದೇವಸ್ಥಾನದ ಆವರಣದಲ್ಲಿ ಬೆಳೆದಿರುವ ಓಂಕಾರ ರೂಪದ ಬನ್ನಿ ಮಂಟಪವು ಭಕ್ತರಲ್ಲಿ ವಿಶೇಷ ಆಕರ್ಷಣೆ ಮೂಡಿಸಿದೆ. ಶರನ್ನವರಾತ್ರಿ ಸಂದರ್ಭದಲ್ಲಿ ದೇವಸ್ಥಾನಕ್ಕೆ ಆಗಮಿಸುವ ಭಕ್ತರು ಬನ್ನಿ ಮಂಟಪದ ದರ್ಶನ ಪಡೆದು ಪೂಜೆ ಸಲ್ಲಿಸುತ್ತಿದ್ದಾರೆ.

ವಿಶೇಷ ಪೂಜೆಯ ನಂತರ ಮಹಿಳೆಯರು ಶ್ರೀ ವೀರಭದ್ರೇಶ್ವರ ಸ್ವಾಮಿಯ ದರ್ಶನ ಪಡೆದು, ದೇವಸ್ಥಾನದ ಅರ್ಚಕರಾದ ಶಶಿಕುಮಾರ ಸ್ವಾಮಿ ಹಾಗೂ ವೀರೇಶ ಸ್ವಾಮಿ ಅವರಿಂದ ತೀರ್ಥಪ್ರಸಾದ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ದೇವಸ್ಥಾನದ ಸೇವಕ ಹಾಗೂ ಪರಮಭಕ್ತ ಜಪಾನ ಶರಣಪ್ಪ ಸೇರಿದಂತೆ ಅನೇಕ ಸದ್ಭಕ್ತರು ಉಪಸ್ಥಿತರಿದ್ದರು.

## ಆರ್‌ಡಿಸಿಸಿ ಬ್ಯಾಂಕ್ ನಿರ್ದೇಶಕರ ಚುನಾವಣೆಗೆ ಪ್ರತಿನಿಧಿಯಾಗಿ ಹನುಮಂತಿ ಸೋಮಕಾರ ಅವಿರೋಧ ಆಯ್ಕೆ

ದೇವದುರ್ಗ: ರಾಯಚೂರುಕೊಪ್ಪಳ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನ (ಆರ್‌ಡಿಸಿಸಿ) ನಿರ್ದೇಶಕರ ಚುನಾವಣೆಯಲ್ಲಿ ಭಾಗವಹಿಸಲು ದೇವದುರ್ಗ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಪ್ರತಿನಿಧಿಯಾಗಿ ಸಂಘದ ಉಪಾಧ್ಯಕ್ಷೆ ಹನುಮಂತಿ ದೊಡ್ಡ ಹನುಮಂತ್ರಾಯ ಸೋಮಕಾರ ಅವರನ್ನು ಸರ್ವಾನುಮತದಿಂದ ಅವಿರೋಧವಾಗಿ ಆಯ್ಕೆ ಮಾಡಲಾಯಿತು.



ಪಟ್ಟಣದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತದ ಕಚೇರಿಯಲ್ಲಿ ಶುಕ್ರವಾರ ನಡೆದ ಸಭೆಯಲ್ಲಿ ಸಂಘದ ನಿರ್ದೇಶಕ ತಾಯಪ್ಪ ಗೋಸಲ್ ಅವರು ಹನುಮಂತಿ ಸೋಮಕಾರ ಅವರ ಹೆಸರನ್ನು ಪ್ರತಿನಿಧಿ ಸ್ಥಾನಕ್ಕೆ ಪ್ರಸ್ತಾಪಿಸಿದರು. ಇದಕ್ಕೆ ನಿರ್ದೇಶಕ ಭೀಮನಗೌಡ ಮಾಲಿ ಪಾಟೀಲ್ ಅನುಮೋದನೆ ನೀಡಿದರು. ಸಭೆಯಲ್ಲಿ ಉಪಸ್ಥಿತರಿದ್ದ ಎಲ್ಲ ನಿರ್ದೇಶಕರು ಒಮ್ಮತದ ಬೆಂಬಲ ವ್ಯಕ್ತಪಡಿಸಿದ್ದರಿಂದ ಯಾವುದೇ ಸ್ಪರ್ಧೆಯಿಲ್ಲದೆ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ಸಂಘದ ಅಧ್ಯಕ್ಷ ಭೀಮರೆಡ್ಡಿ ಪೊ.ಪಾ. ವಗಡಂಬಳಿ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಆಯ್ಕೆಯಾದ ಹನುಮಂತಿ ಸೋಮಕಾರ ಅವರಿಗೆ ಸಂಘದ ಅಧ್ಯಕ್ಷರು, ನಿರ್ದೇಶಕರು ಹಾಗೂ ಪದಾಧಿಕಾರಿಗಳು ಅಭಿನಂದನೆ ಸಲ್ಲಿಸಿ ಶುಭ ಹಾರೈಸಿದರು.

ಸಭೆಯಲ್ಲಿ ನಿರ್ದೇಶಕರಾದ ಭೀಮನಗೌಡ ಮಾ.ಪಾ. ಅಂಜಳ, ನಾಗರಾಜ ಪಾಟೀಲ್ ನಿಲಗಲ್ ಗೌರಂಪೇಟೆ, ಸಿದ್ದಾಮರೆಡ್ಡಿ ಮಾ.ಪಾ. ಅಂಚೆಸೂಗೂರು, ಬಸನಗೌಡ ಪೊ.ಪಾ. ಅರಶಿಣಗಿ, ಶಿವಕುಮಾರ ಅಕ್ಕರಕಿ, ರಂಗಪ್ಪ ನಾಯಕ ಗೋಪಾಳಪುರ, ರಂಗಯ್ಯ ಅಬಕಾರಿ, ಸಿದ್ದಾಮರೆಡ್ಡಿ ಕಮತಗಿ, ಪದ್ಮಾವತಿ ಜೋಳದಹೆಡಗಿ, ತಾಯಪ್ಪ ಗೋಸಲ್, ಆರ್‌ಡಿಸಿಸಿ ಬ್ಯಾಂಕಿನ ವೃತ್ತ ವೀಕ್ಷಕ ಮಹಿಬೂಬ, ಸಹಕಾರ ಸಂಘದ ಮುಖ್ಯ ಕಾರ್ಯನಿರ್ವಾಹಕ ಎಂ. ಸೋಮಶೇಖರ ಹಾಗೂ ಸಿಬ್ಬಂದಿ ಸುಬ್ಬರಾವ್ ಉಪಸ್ಥಿತರಿದ್ದರು.

## ಭಗೀರಥ ಕಾಲೋನಿಯ ಶ್ರೀ ಲಕ್ಷ್ಮೀವೆಂಕಟೇಶ್ವರ ದೇವಸ್ಥಾನದಲ್ಲಿ ನವರಾತ್ರಿ ವಿಶೇಷ ಪೂಜೆ

ಲಿಂಗಸುಗೂರು: ಪಟ್ಟಣದ ರಾಯಚೂರು ರಸ್ತೆಯ ಭಗೀರಥ ಕಾಲೋನಿಯ ಶ್ರೀ ಲಕ್ಷ್ಮೀವೆಂಕಟೇಶ್ವರ ದೇವಸ್ಥಾನದಲ್ಲಿ ದಸರಾ ನವರಾತ್ರಿ ಮಹೋತ್ಸವದ ಅಂಗವಾಗಿ ವಿಶೇಷ ಪೂಜೆ, ಅಭಿಷೇಕ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಭಕ್ತಿಭಾವದಿಂದ ಜರುಗಿದವು.



ದೇವಸ್ಥಾನದ ಪ್ರಧಾನ ಅರ್ಚಕ ವೆಂಕಟೇಶ ಹಾವಿನಾಳ ಅವರ ನೇತೃತ್ವದಲ್ಲಿ ನವರಾತ್ರಿ ಉತ್ಸವದ ಪ್ರಯುಕ್ತ ಪ್ರತಿದಿನ ಶ್ರೀ ವೆಂಕಟೇಶ್ವರ ಸ್ವಾಮಿಯ ಮೂರ್ತಿಗೆ ಪಂಚಾಮೃತ ಅಭಿಷೇಕ ನೆರವೇರಿಸಿ, ವಿವಿಧ ಬಗೆಯ ಹೂವುಗಳಿಂದ ವಿಶೇಷ ಅಲಂಕಾರ ಮಾಡಲಾಗಿತ್ತು. ಭಕ್ತರು ದೇವಸ್ಥಾನಕ್ಕೆ ಆಗಮಿಸಿ ದೇವರ ದರ್ಶನ ಪಡೆದು ಪೂಜೆ ಸಲ್ಲಿಸಿದರು.

ಅಕ್ಟೋಬರ್ 15ರಂದು ದೇವಪುರದ ಮಾಧವ ಜೋಶಿ ಅವರ ನೇತೃತ್ವದಲ್ಲಿ ಶ್ರೀನಿವಾಸ ಕಲ್ಯಾಣೋತ್ಸವ ಹಾಗೂ ಹೋಮ, ಹವನ ಸೇರಿದಂತೆ ವಿವಿಧ ಧಾರ್ಮಿಕ ವಿಧಿವಿಧಾನಗಳು ನೆರವೇರಿದವು. ಈ ಸಂದರ್ಭದಲ್ಲಿ ಮಹಿಳಾ ಭಜನಾ ಮಂಡಳಿಯ ಸದಸ್ಯರು ಭಕ್ತಿಗೀತೆಗಳನ್ನು ಹಾಡುವ ಮೂಲಕ ದೇವರ ನಾಮಸ್ಮರಣೆ ಮಾಡಿದರು.

ನವರಾತ್ರಿ ಮಹೋತ್ಸವದ ಅಂಗವಾಗಿ ಮಹಿಳೆಯರಿಂದ ಭಜನೆ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ದೇವಸ್ಥಾನದಲ್ಲಿ ನಡೆದ ಶ್ರೀನಿವಾಸ ಕಲ್ಯಾಣೋತ್ಸವದಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ದೇವರ ಆಶೀರ್ವಾದ ಪಡೆದರು.

ಕಾರ್ಯಕ್ರಮದಲ್ಲಿ ಮಹಿಳಾ ಭಜನಾ ಮಂಡಳಿ ಅಧ್ಯಕ್ಷೆ ಜಯಶ್ರೀ ವಿ. ಹಾವಿನಾಳ, ಅಶ್ವಿನಿ ವಿ. ಪಾಟೀಲ್, ಚಂದ್ರಕಲಾ ಜೋಶಿ ಹೊಸಪೇಟೆ, ಗೋಪಾಲ್ ಕುಲಕರ್ಣಿ ಆನೆಹೊಸೂರು, ವೆಂಕನಗೌಡ ಪಾಟೀಲ್, ರಾಘವೇಂದ್ರ ಕುಲಕರ್ಣಿ ಸೇರಿದಂತೆ ಶ್ರೀ ವೆಂಕಟೇಶ್ವರ ದೇವಸ್ಥಾನ ಸಮಿತಿಯ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಭಗೀರಥ ಕಾಲೋನಿಯ ಭಕ್ತಾದಿಗಳು ಉಪಸ್ಥಿತರಿದ್ದರು.

## ನೂತನ ಡಿವೈಎಸ್ಪಿ ಸುಲೇಮಾನ್ ತಹಸೀಲ್ದಾರ್ ಅವರಿಗೆ ಟಿಪ್ಪು ಸುಲ್ತಾನ್ ಸಂಘದಿಂದ ಸನ್ಮಾನ

ಲಿಂಗಸುಗೂರು: ಲಿಂಗಸುಗೂರು ತಾಲೂಕು ಪೊಲೀಸ್ ಇಲಾಖೆಯ ನೂತನ ಡಿವೈಎಸ್ಪಿಯಾಗಿ ಅಧಿಕಾರ ವಹಿಸಿಕೊಂಡಿರುವ ಸುಲೇಮಾನ್ ತಹಸೀಲ್ದಾರ್ ಅವರನ್ನು ತಾಲೂಕು ಟಿಪ್ಪು ಸುಲ್ತಾನ್ ಸಂಘದ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಲಾಯಿತು.



ಈ ಸಂದರ್ಭದಲ್ಲಿ ಸಂಘದ ತಾಲೂಕು ಅಧ್ಯಕ್ಷ ಅಲ್ಲಾಬಕ್ಷ ಮನಿಯಾರ್ ನೇತೃತ್ವದಲ್ಲಿ ಪದಾಧಿಕಾರಿಗಳು ನೂತನ ಡಿವೈಎಸ್ಪಿ ಅವರಿಗೆ ಸನ್ಮಾನ ಸಲ್ಲಿಸಿ, ಶುಭ ಹಾರೈಸಿದರು. ತಾಲೂಕಿನಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಕೈಗೊಳ್ಳುವ ಕಾರ್ಯಗಳಿಗೆ ಸಾರ್ವಜನಿಕರ ಸಹಕಾರವೂ ಅಗತ್ಯವಾಗಿದೆ ಎಂಬ ಅಭಿಪ್ರಾಯ ವ್ಯಕ್ತಪಡಿಸಿದರು.

ನೂತನ ಅಧಿಕಾರಿಯ ಆಗಮನವನ್ನು ಸ್ವಾಗತಿಸಿದ ಸಂಘದ ಸದಸ್ಯರು, ಅವರ ಅಧಿಕಾರಾವಧಿಯಲ್ಲಿ ತಾಲೂಕಿನಲ್ಲಿ ಶಾಂತಿ, ಸೌಹಾರ್ದತೆ ಹಾಗೂ ಸಾರ್ವಜನಿಕ ಸುರಕ್ಷತೆಗೆ ಹೆಚ್ಚಿನ ಆದ್ಯತೆ ದೊರೆಯಲಿ ಎಂದು ಆಶಿಸಿದರು.

ಈ ಸಂದರ್ಭದಲ್ಲಿ ಸಂಘದ ಪದಾಧಿಕಾರಿಗಳಾದ ಶೇಕ್ ಅಹಮದ್, ಅಶು, ಹಿರಿಯ ಪತ್ರಕರ್ತ ಅರ್ಜ್ಜ ಸೈಯದ್, ಇಮ್ರಾನ್, ಮೆಹಬೂಬ್, ಶಾಹಿದ್ ಹವಾಲ್ದಾರ್, ಯುನೋಸ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಜಿ.ಪಂ ಮೀಸಲಾತಿ ಕರಡಿನಲ್ಲಿ ಬಿಸಿಎಂ-ಬಿ ಪ್ರವರ್ಗಕ್ಕೆ ಒಂದೂ ಕ್ಷೇತ್ರವಿಲ್ಲ: ಚಂದ್ರಶೇಖರ ಪಾಟೀಲ್ ಆಕ್ರೋಶ



ದೇವದುರ್ಗ, ಅ. 16: ರಾಯಚೂರು ಜಿಲ್ಲಾ ಪಂಚಾಯತ್ ಕ್ಷೇತ್ರಗಳ ಮೀಸಲಾತಿಗೆ ಸಂಬಂಧಿಸಿದಂತೆ ಪ್ರಕಟಿಸಿರುವ ಕರಡು ಅಧಿಸೂಚನೆಯಲ್ಲಿ ಬಿಸಿಎಂ-ಬಿ (ಪ್ರವರ್ಗ-ಬಿ) ವರ್ಗಕ್ಕೆ ಒಂದೂ ಕ್ಷೇತ್ರವನ್ನು ಮೀಸಲಿಡದಿರುವುದು ಅನ್ಯಾಯವಾಗಿದ್ದು, ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಕರಡು ಪಟ್ಟಿಯನ್ನು ಪರಿಷ್ಕರಿಸಿ ಸಮಾನ ಪ್ರಾತಿನಿಧ್ಯ ಕಲ್ಪಿಸಬೇಕು ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಮಾಜಿ ಜಿಲ್ಲಾಧ್ಯಕ್ಷ ಚಂದ್ರಶೇಖರ ಪಾಟೀಲ್ ಮಿಯಾಪುರ ಆಗ್ರಹಿಸಿದರು.

ಪಟ್ಟಣದ ಉದ್ಯಮಿ ಬಾನುಪ್ರಕಾಶ್ ಖೇಣೆದ್ ಅವರ ಕಾರ್ಯಾಲಯದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಯಚೂರು ಜಿಲ್ಲೆಯಲ್ಲಿ ವೀರಶೈವ ಲಿಂಗಾಯತ ಸಮುದಾಯಕ್ಕೆ ರಾಜಕೀಯ ಪ್ರಾತಿನಿಧ್ಯದ ವಿಚಾರದಲ್ಲಿ ನಿರಂತರವಾಗಿ ಅನ್ಯಾಯವಾಗುತ್ತಿದೆ. ಇದೀಗ ಜಿಲ್ಲಾ ಪಂಚಾಯತ್ ಕ್ಷೇತ್ರಗಳ ಮೀಸಲಾತಿ ಕರಡು ಪಟ್ಟಿಯಲ್ಲಿಯೂ ಸಮುದಾಯವನ್ನು ಕಡೆಗಣಿಸಿರುವುದು ತೀವ್ರ ಅಸಮಾಧಾನಕ್ಕೆ ಕಾರಣವಾಗಿದೆ ಎಂದು ಆರೋಪಿಸಿದರು.

ರಾಯಚೂರು ಜಿಲ್ಲೆಯಲ್ಲಿ ಒಟ್ಟು 39 ಜಿಲ್ಲಾ ಪಂಚಾಯತ್ ಕ್ಷೇತ್ರಗಳಿದ್ದು, ಮೀಸಲಾತಿ ನಿಗದಿಪಡಿಸುವ ಸಂದರ್ಭದಲ್ಲಿ ವಿವಿಧ ಸಮುದಾಯಗಳಿಗೆ ನ್ಯಾಯಯುತ ಪ್ರಾತಿನಿಧ್ಯ ದೊರೆಯುವಂತೆ ನೋಡಿಕೊಳ್ಳಬೇಕಿತ್ತು. ಆದರೆ ಪ್ರಕಟಿಸಿರುವ ಕರಡು ಅಧಿಸೂಚನೆಯಲ್ಲಿ ವೀರಶೈವ ಲಿಂಗಾಯತ ಸಮುದಾಯವನ್ನು ಒಳಗೊಂಡಿರುವ ಬಿಸಿಎಂ-ಬಿ ಪ್ರವರ್ಗಕ್ಕೆ ಒಂದೇ ಒಂದು ಕ್ಷೇತ್ರವನ್ನೂ ಮೀಸಲಿಡದಿರುವುದು ಸರಿಯಲ್ಲ. ಈ ಕುರಿತು ಈಗಾಗಲೇ ಸಂಬಂಧಪಟ್ಟ ಅಧಿಕಾರಿಗಳಿಗೆ ಆಕ್ಷೇಪಣೆ ಸಲ್ಲಿಸಲಾಗಿದೆ ಎಂದು ತಿಳಿಸಿದರು.

ಸ್ಥಳೀಯ ಸ್ವಯಂ ಆಡಳಿತ ಸಂಸ್ಥೆಗಳಲ್ಲಿ ಎಲ್ಲ ವರ್ಗಗಳಿಗೂ ಸೂಕ್ತ ರಾಜಕೀಯ ಪ್ರಾತಿನಿಧ್ಯ ದೊರೆಯುವುದು ಪ್ರಜಾಪ್ರಭುತ್ವದ ಆಶಯವಾಗಿದೆ. ಯಾವುದೇ ಒಂದು ವರ್ಗಕ್ಕೆ ಮೀಸಲಾತಿಯ ಅವಕಾಶವೇ ಸಿಗದಂತಾದರೆ ಆ ಸಮುದಾಯದ ರಾಜಕೀಯ ಪ್ರಾತಿನಿಧ್ಯಕ್ಕೆ ಹಿನ್ನಡೆಯಾಗುತ್ತದೆ. ಇದು ಕೇವಲ ವೀರಶೈವ ಲಿಂಗಾಯತ ಸಮುದಾಯಕ್ಕೆ ಸಂಬಂಧಿಸಿದ ವಿಷಯವಲ್ಲ, ಸಾಮಾಜಿಕ ನ್ಯಾಯ ಹಾಗೂ ಸಮಾನ ಅವಕಾಶದ ಪ್ರಶ್ನೆಯಾಗಿದೆ ಎಂದು ಅಭಿಪ್ರಾಯಪಟ್ಟರು.

ಮೀಸಲಾತಿಯ ರೋಸ್ಟರ್ ಪದ್ಧತಿಯ ಪ್ರಮುಖ ಉದ್ದೇಶವೇ ವಿವಿಧ ವರ್ಗಗಳಿಗೆ ಕಾಲಕಾಲಕ್ಕೆ ಅವಕಾಶ ಕಲ್ಪಿಸುವುದಾಗಿದೆ. ಹಿಂದಿನ ಚುನಾವಣೆಗಳಲ್ಲಿ ಬಿಸಿಎಂ-ಬಿ ಪ್ರವರ್ಗಕ್ಕೆ ಮೀಸಲಾಗಿದ್ದ ಕ್ಷೇತ್ರಗಳು ಹಾಗೂ ಪ್ರಸ್ತುತ ರೋಸ್ಟರ್ ಚಕ್ರವನ್ನು ಸಮರ್ಪಕವಾಗಿ ಪರಿಶೀಲಿಸದೆ ಈ ಪ್ರವರ್ಗಕ್ಕೆ ಯಾವುದೇ ಸ್ಥಾನ ನೀಡದಿರುವುದು ರೋಸ್ಟರ್ ನಿಯಮಗಳ ಉಲ್ಲಂಘನೆಯಾಗಿದೆ ಎಂದು ಆರೋಪಿಸಿದರು.

ರಾಯಚೂರು ಜಿಲ್ಲೆಯ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಹಾಗೂ ರಾಜಕೀಯ ಬೆಳವಣಿಗೆಯಲ್ಲಿ ವೀರಶೈವ ಲಿಂಗಾಯತ ಸಮುದಾಯ ಮಹತ್ವದ ಕೊಡುಗೆ ನೀಡಿದೆ. ಇಂತಹ ಸಮುದಾಯದ ರಾಜಕೀಯ ಪ್ರಾತಿನಿಧ್ಯಕ್ಕೆ ಅವಕಾಶ ಕಲ್ಪಿಸದಿರುವುದು ತಾರತಮ್ಯದ ಧೋರಣೆಯಾಗಿದೆ. ಮೀಸಲಾತಿ ನಿಗದಿಯಲ್ಲಿ ಪಾರದರ್ಶಕತೆ ಕಾಯ್ದುಕೊಂಡು ಎಲ್ಲ ವರ್ಗಗಳಿಗೂ ನ್ಯಾಯ ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಕರಡು ಅಧಿಸೂಚನೆಗೆ ಸಲ್ಲಿಸಿರುವ ಆಕ್ಷೇಪಣೆಗಳನ್ನು ಗಂಭೀರವಾಗಿ ಪರಿಗಣಿಸಿ, ಮೀಸಲಾತಿ ನಿಗದಿಯ ಮಾನದಂಡಗಳು ಹಾಗೂ ರೋಸ್ಟರ್ ಕ್ರಮವನ್ನು ಮರುಪರಿಶೀಲಿಸಬೇಕು. ಬಿಸಿಎಂ-ಬಿ ಪ್ರವರ್ಗಕ್ಕೆ ನ್ಯಾಯಯುತ ಅವಕಾಶ ಕಲ್ಪಿಸದಿದ್ದರೆ ಮುಂದಿನ ದಿನಗಳಲ್ಲಿ ಕಾನೂನು ಹೋರಾಟ ನಡೆಸುವುದು ಅನಿವಾರ್ಯವಾಗಲಿದೆ ಎಂದು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಉದ್ಯಮಿ ಬಾನುಪ್ರಕಾಶ್ ಖೇಣೆದ್, ಪ್ರಕಾಶ್ ಪಾಟೀಲ್ ಅಮರಪುರ, ಪ್ರವೀಣ್ ಕುಮಾರ ಹಾಗೂ ಶರಣಬಸವ ರಾಮದುರ್ಗ ಉಪಸ್ಥಿತರಿದ್ದರು.

## ಕುಡಿಯುವ ನೀರಿನ ಸಮಸ್ಯೆ ಖಂಡಿಸಿ ಬ್ಯಾಗವಾಟ ಗ್ರಾಮ ಪಂಚಾಯಿತಿಗೆ ಬೀಗ ಜಡಿದು ಪ್ರತಿಭಟನೆ



ಮಾನ್ವಿ: ಗ್ರಾಮದಲ್ಲಿ ಕೆರೆ ತುಂಬಿದ್ದರೂ ಮನೆಗಳಿಗೆ ಕುಡಿಯುವ ನೀರು ಪೂರೈಕೆಯಾಗುತ್ತಿಲ್ಲ. ದಸರಾ ಹಬ್ಬದ ಹಿನ್ನೆಲೆಯಲ್ಲಿ ಮನೆಗಳಿಗೆ ನೆಂಟರು ಆಗಮಿಸಿದ್ದು, ಕುಡಿಯಲು ಒಂದು ಹನಿ ನೀರಿಲ್ಲದೆ ಪರದಾಡುವಂತಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ ತಾಲೂಕಿನ ಬ್ಯಾಗವಾಟ ಗ್ರಾಮದ ನೂರಾರು ನಿವಾಸಿಗಳು ಶುಕ್ರವಾರ ಗ್ರಾಮ ಪಂಚಾಯಿತಿ ಕಚೇರಿಗೆ ಬೀಗ ಜಡಿದು ಪ್ರತಿಭಟನೆ ನಡೆಸಿದರು.

ಕಳೆದ ಆರು ದಿನಗಳಿಂದ ಗ್ರಾಮದಲ್ಲಿ ಸಮರ್ಪಕವಾಗಿ ಕುಡಿಯುವ ನೀರು ಪೂರೈಕೆಯಾಗದಿರುವುದರಿಂದ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಹಬ್ಬದ ಸಂದರ್ಭದಲ್ಲಾದರೂ ನೀರಿನ ವ್ಯವಸ್ಥೆ ಕಲ್ಪಿಸುವಂತೆ ಹಲವು ಬಾರಿ ಮನವಿ ಮಾಡಿದರೂ ಗ್ರಾಮ ಪಂಚಾಯಿತಿ ಅಧಿಕಾರಿಗಳು ಸ್ಪಂದಿಸುತ್ತಿಲ್ಲ ಎಂದು ಪ್ರತಿಭಟನಾಕಾರರು ಅಸಮಾಧಾನ ವ್ಯಕ್ತಪಡಿಸಿದರು.

ಗ್ರಾಮದ ನಿವಾಸಿ ರವಿ ಪಾಟೀಲ್ ಮಾತನಾಡಿ, ಬ್ಯಾಗವಾಟ ಗ್ರಾಮದ ಕುಡಿಯುವ ನೀರಿನ ಕೆರೆ ಸಂಪೂರ್ಣ ತುಂಬಿದೆ. ಆದರೆ ಕೆರೆಯ ನೀರನ್ನು ಶುದ್ಧೀಕರಿಸಿ ಮನೆಗಳಿಗೆ ಸರಬರಾಜು ಮಾಡುವಲ್ಲಿ ಗ್ರಾಮ ಪಂಚಾಯಿತಿ ಆಡಳಿತ ವಿಫಲವಾಗಿದೆ. ನೀರು ಸರಬರಾಜು ಸಿಬ್ಬಂದಿ ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶಿವಕುಮಾರ ಅವರ ನಿರ್ಲಕ್ಷ್ಯದಿಂದ ಮಲ್ಲಿಕಾರ್ಜುನ ಗುಡ್ಡದ ಬಳಿಯ ಕುಡಿಯುವ ನೀರಿನ ಟ್ಯಾಂಕ್‌ಗೆ ನೀರು ತುಂಬಿಸುವ ಕಾರ್ಯ ನಡೆಯುತ್ತಿಲ್ಲ ಎಂದು ಆರೋಪಿಸಿದರು.

ಗ್ರಾಮದ ಜನವಸತಿ ಪ್ರದೇಶದಲ್ಲಿರುವ ಹಳೆಯ ನೀರಿನ ಟ್ಯಾಂಕ್ ಶಿಥಿಲಾವಸ್ಥೆಗೆ ತಲುಪಿದ್ದು, ಅದರಲ್ಲಿ ನೀರು ಸಂಗ್ರಹಿಸಲು ಸಾಧ್ಯವಾಗುತ್ತಿಲ್ಲ. ಪರಿಣಾಮ ಅಂಬೇಡ್ಕರ್ ನಗರ ಸೇರಿದಂತೆ ನಾಲ್ಕು ವಾರ್ಡ್‌ಗಳ ನಿವಾಸಿಗಳಿಗೆ ಕಳೆದ ಆರು ದಿನಗಳಿಂದ ಸಮರ್ಪಕ ನೀರು ದೊರೆಯುತ್ತಿಲ್ಲ. ನೀರಿನ ಸಮಸ್ಯೆ ಕುರಿತು ಅಧಿಕಾರಿಗಳ ಗಮನ ಸೆಳೆಯಲು ಪ್ರಯತ್ನಿಸಿದರೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಕಚೇರಿಯಲ್ಲಿ ಲಭ್ಯವಾಗುತ್ತಿಲ್ಲ ಎಂದು ದೂರಿದರು.

ನಾಡಹಬ್ಬ ದಸರಾ ಆಚರಣೆಯ ಸಂಭ್ರಮದಲ್ಲಿರುವ ಗ್ರಾಮಸ್ಥರಿಗೆ ನೀರಿನ ಕೊರತೆ ದೊಡ್ಡ ಸಮಸ್ಯೆಯಾಗಿ ಪರಿಣಮಿಸಿದೆ. ಗ್ರಾಮದ ದೇವಸ್ಥಾನಗಳಲ್ಲಿ ಪ್ರತಿದಿನ ಶ್ರೀದೇವಿ ಪುರಾಣ ಹಾಗೂ ಪ್ರವಚನ ಕಾರ್ಯಕ್ರಮಗಳು ನಡೆಯುತ್ತಿದ್ದು, ಅನ್ನದಾಸೋಹಕ್ಕೆ ಆಗಮಿಸುವ ಭಕ್ತರಿಗೆ ಕುಡಿಯುವ ನೀರು ಒದಗಿಸಲು ಟ್ಯಾಂಕರ್‌ಗಳನ್ನು ಅವಲಂಬಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಹಬ್ಬದ ಸಂದರ್ಭದಲ್ಲಿಯೂ ಕನಿಷ್ಠ ಕುಡಿಯುವ ನೀರಿನ ವ್ಯವಸ್ಥೆ ಮಾಡದಿರುವುದು ಗ್ರಾಮ ಪಂಚಾಯಿತಿಯ ನಿರ್ಲಕ್ಷ್ಯಕ್ಕೆ ಸಾಕ್ಷಿಯಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಗ್ರಾಮದ ಹಳೆಯ ನೀರಿನ ಟ್ಯಾಂಕ್ ಯಾವುದೇ ಕ್ಷಣದಲ್ಲಿ ಕುಸಿದು ಬೀಳುವ ಅಪಾಯವಿದ್ದು, ಸಾರ್ವಜನಿಕರ ಸುರಕ್ಷತೆಯ ದೃಷ್ಟಿಯಿಂದ ಅದನ್ನು ತೆರವುಗೊಳಿಸಿ ಅದೇ ಸ್ಥಳದಲ್ಲಿ ಹೊಸ ಟ್ಯಾಂಕ್ ನಿರ್ಮಿಸಬೇಕು. ಅಲ್ಲದೆ, ಮಲ್ಲಿಕಾರ್ಜುನ ಗುಡ್ಡದ ಬಳಿಯ ಟ್ಯಾಂಕ್‌ಗೆ ನೀರು ತುಂಬಿಸಿ ಎಲ್ಲ ವಾರ್ಡ್‌ಗಳಿಗೂ ನಿಯಮಿತವಾಗಿ ಶುದ್ಧ ಕುಡಿಯುವ ನೀರು ಪೂರೈಸಲು ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಕುಡಿಯುವ ನೀರಿನ ಸಮಸ್ಯೆ ಪರಿಹರಿಸುವಂತೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗೆ ಮನವಿ ಸಲ್ಲಿಸಲು ನೂರಾರು ಗ್ರಾಮಸ್ಥರು ಕಚೇರಿಗೆ ಆಗಮಿಸಿದ್ದರು. ಆದರೆ ಅಧಿಕಾರಿ ಶಿವಕುಮಾರ ಅವರು ಕಚೇರಿಯಲ್ಲಿ ಇಲ್ಲದಿರುವುದರಿಂದ ಅಸಮಾಧಾನಗೊಂಡ ಗ್ರಾಮಸ್ಥರು ಪಂಚಾಯಿತಿ ಕಚೇರಿಗೆ ಬೀಗ ಹಾಕಿ ಪ್ರತಿಭಟನೆ ನಡೆಸಿದರು. ಸಂಬಂಧಪಟ್ಟ ಅಧಿಕಾರಿ ಸ್ಥಳಕ್ಕೆ ಆಗಮಿಸಿ ಸಮಸ್ಯೆ ಪರಿಹಾರಕ್ಕೆ ಕ್ರಮ ಕೈಗೊಳ್ಳುವವರೆಗೂ ಪ್ರತಿಭಟನೆ ಮುಂದುವರಿಸುವುದಾಗಿ ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ನಾಗರಾಜ ಹೂಗಾರ, ನಾಗರಾಜ ಗುಗ್ಗರಿ, ವೃಷಭೇಂದ್ರಸ್ವಾಮಿ ಸಿರವಾರಮಠ, ಬಸವರಾಜ ಜಕ್ಕರೆಡ್ಡಿ, ಅಂಬರೇಶ ಸುರಪುರ, ಮಹಾಂತೇಶ ಸುರಪುರ, ಚಂದ್ರಶೇಖರ ಹೂಗಾರ, ಪಂಪಾಪತಿ, ಸಾಲಿ ಮಹಾಂತೇಶ, ಮಹಾಂತೇಶ ಸಿರವಾರಮಠ, ಮಲ್ಲಪ್ಪ ಬಂಡೆಗುಡಿ ಸೇರಿದಂತೆ ನೂರಾರು ಗ್ರಾಮಸ್ಥರು ಭಾಗವಹಿಸಿದ್ದರು.

## ಇಂದು ವಿದ್ಯುತ್ ಗ್ರಾಹಕರ ಸಂವಾದ ಸಭೆ

ರಾಯಚೂರು ಅ. 16 (ಕರ್ನಾಟಕ ವಾರ್ತೆ): ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ 2ರ ಕಚೇರಿಯಲ್ಲಿ ಅಕ್ಟೋಬರ್ 17ರ ಬೆಳಿಗ್ಗೆ 11ಗಂಟೆಗೆ ಗ್ರಾಹಕರ ಸಂವಾದ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ವಿದ್ಯುತ್ ಗ್ರಾಹಕರು ವಿದ್ಯುತ್ ದೂರುಗಳ ಬಗ್ಗೆ ಸಭೆಗೆ ಹಾಜರಾಗಿ ದೂರನ್ನು ಇತ್ಯರ್ಥಪಡಿಸಿಕೊಳ್ಳಲು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ 2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅ. 18ರಂದು ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ

ರಾಯಚೂರು ಅ. 16 (ಕರ್ನಾಟಕ ವಾರ್ತೆ): ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ-1ರ ವ್ಯಾಪ್ತಿಯಲ್ಲಿ ಲೈನ್ ಮೆಂಟೇನೆನನ್ಸ ಕಾಮಗಾರಿ ನಿರ್ವಹಿಸುತ್ತಿರುವ ಪ್ರಯುಕ್ತ ಅಕ್ಟೋಬರ್ 18ರ ಬೆಳಿಗ್ಗೆ 10 ಗಂಟೆಯಿದ ಸಂಜೆ 05ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ.

ಅಂದು ಬೆಳಿಗ್ಗೆಯಿಂದ ಬಂದೆ ನವಾಜ್ ಕಾಲೋನಿ, ಬಸವೇಶ್ವರ ನಗರ, ಪಿ.ಅಶೋಕ್‌ಕುರ್ಮಾ ಲೇಔಟ್, ಎಕ್ಲಾಸ್‌ಪುರ ರೋಡ್, ದೇವರಾಜ ಅರಸ್ ಕಾಲೋನಿ, ಡಿ.ಸಿ ಆಫೀಸ್, ಎಮ್.ಎಲ್.ಎ ಆಫೀಸ್, ವಿವೇಕಾನಂದ ಕಾಲೋನಿ, ಆದರ್ಶ್ ಕಾಲೋನಿ, ಗದ್ವಾಲ ಯಂಕಮ್ಮ ಲೇಔಟ್, ಆದಿತ್ಯ ಕಾಲೋನಿ, ಎಸ್.ಟಿ ಲೇಔಟ್, ಗಾಂಧಿ ಲೇಔಟ್, ನಿಜಾಮುದ್ದೀನ್ ಕಾಲೋನಿ, ಹೇಮಾ ಫ್ರೆಡ್ ಅಪಾರ್ಟ್ಮೆಂಟ್ಸ್, ಅವ್ವ ಕಾಲೋನಿ, ಕಾಕತೀಯ ಕಾಲೋನಿ, ಪಿ.ವಿ.ನಗರ ಮೆಹಬೂಬಿಯ ಕಾಲೋನಿ ಸೇರಿದಂತೆ ಸುತ್ತಮುತ್ತಲಿನ ಪ್ರದೇಶದಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08532-226386, 08532-231999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ-1ರಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಸ್ ನಿಲ್ದಾಣದ ಶೌಚಾಲಯ ಅವ್ಯವಸ್ಥೆ ಸರಿಪಡಿಸಲು ಆಗ್ರಹ




ದೇವದುರ್ಗ: ತಾಲೂಕಿನ ಗಬ್ಬೂರು ಬಸ್ ನಿಲ್ದಾಣದಲ್ಲಿರುವ ಸಾರ್ವಜನಿಕ ಶೌಚಾಲಯ ನಿರ್ವಹಣೆ ಇಲ್ಲದೆ ದುಸ್ಥಿತಿಗೆ ತಲುಪಿದ್ದು, ಮಹಿಳಾ ಮತ್ತು ಪುರುಷರ ಶೌಚಾಲಯಗಳಿಗೆ ಬೀಗ ಹಾಕಿರುವುದರಿಂದ ಪ್ರಯಾಣಿಕರು ಹಾಗೂ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುವಂತಾಗಿದೆ. ಕೂಡಲೇ ಶೌಚಾಲಯವನ್ನು ಸಾರ್ವಜನಿಕ ಬಳಕೆಗೆ ಮುಕ್ತಗೊಳಿಸಿ, ಅಗತ್ಯ ಮೂಲಸೌಕರ್ಯಗಳನ್ನು ಒದಗಿಸಬೇಕು ಎಂದು ಅಖಂಡ ಕರ್ನಾಟಕ ರಕ್ಷಣಾ ಸೇವಾ ದಳದ ರಾಯಚೂರು ಜಿಲ್ಲಾಧ್ಯಕ್ಷ ಆರ್. ಎಂ. ನಡುಮನಿ ಆಗ್ರಹಿಸಿದ್ದಾರೆ.

ಈ ಕುರಿತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ (ಕೆಕೆಆರ್ ಟಿಸಿ) ವ್ಯವಸ್ಥಾಪಕ ನಿರ್ದೇಶಕಿ ಡಾ. ಸುಶೀಲ ಬಿ. ಅವರಿಗೆ ಅಕ್ಟೋಬರ್ 16ರಂದು ದೂರು ಸಲ್ಲಿಸಿರುವ ಅವರು, ಗಬ್ಬೂರು ಪ್ರಮುಖ ಹೋಬಳಿ ಕೇಂದ್ರವಾಗಿದ್ದು, ಸುತ್ತಮುತ್ತಲಿನ ಅನೇಕ ಗ್ರಾಮಗಳ ಜನರು ಸಾರಿಗೆ ಸಂಪರ್ಕಕ್ಕಾಗಿ ಈ ಬಸ್ ನಿಲ್ದಾಣವನ್ನು ಅವಲಂಬಿಸಿದ್ದಾರೆ. ನಿತ್ಯವೂ ಪ್ರಯಾಣಿಕರು, ವಿದ್ಯಾರ್ಥಿಗಳು, ಮಹಿಳೆಯರು ಹಾಗೂ ಸಾರ್ವಜನಿಕರು ಇಲ್ಲಿಗೆ ಆಗಮಿಸುತ್ತಿದ್ದರೂ ಕನಿಷ್ಠ ಶೌಚಾಲಯ ಸೌಲಭ್ಯವೂ ಲಭ್ಯವಿಲ್ಲದಿರುವುದು ವಿಷಾದನೀಯ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಜನವರಿ 2025ರಲ್ಲಿ ಕೆಕೆಆರ್‌ಟಿಸಿ ವತಿಯಿಂದ ರಾಯಚೂರು ಜಿಲ್ಲೆಯ ತಾಲೂಕು ಹಾಗೂ ಹೋಬಳಿ ಕೇಂದ್ರಗಳಲ್ಲಿರುವ ಒಟ್ಟು 14 ಬಸ್ ನಿಲ್ದಾಣಗಳ ಶೌಚಾಲಯಗಳ ನಿರ್ವಹಣೆಗೆ ಟೆಂಡರ್ ಕರೆಯಲಾಗಿತ್ತು. ಕೊಪ್ಪಳ ಜಿಲ್ಲೆಯ ರಾಜೇಶ್ ಎಂಬುವವರು ಈ ಗುತ್ತಿಗೆ ಪಡೆದುಕೊಂಡಿದ್ದಾರೆ. ಆದರೆ, ಗುತ್ತಿಗೆ ನೀಡಿದ ನಂತರವೂ ಗಬ್ಬೂರು ಬಸ್ ನಿಲ್ದಾಣದ ಶೌಚಾಲಯವನ್ನು ಸಮರ್ಪಕವಾಗಿ ನಿರ್ವಹಿಸಿಲ್ಲ ಎಂದು ದೂರಿನಲ್ಲಿ ಆರೋಪಿಸಿದ್ದಾರೆ.

ಬಸ್ ನಿಲ್ದಾಣದಲ್ಲಿ ಶೌಚಾಲಯ ಕಟ್ಟಡವಿದ್ದರೂ ಸಾರ್ವಜನಿಕರ ಉಪಯೋಗಕ್ಕೆ ಬಾರದಂತಾಗಿದೆ. ಮಹಿಳೆಯರು ಹಾಗೂ ಪುರುಷರ ಶೌಚಾಲಯಗಳಿಗೆ ಬೀಗ ಹಾಕಲಾಗಿದ್ದು, ಸ್ವಚ್ಛತೆ ಸಂಪೂರ್ಣ ನಿರ್ಲಕ್ಷ್ಯಕ್ಕೊಳಗಾಗಿದೆ. ಶೌಚಾಲಯದ ಸುತ್ತಮುತ್ತ ದುರ್ವಾಸನೆ ಹರಡುತ್ತಿದ್ದು, ನಿರ್ವಹಣೆಗೆ ಸಿಬ್ಬಂದಿಯನ್ನೂ ನಿಯೋಜಿಸಿಲ್ಲ. ಇದರಿಂದ ದೂರದ ಗ್ರಾಮಗಳಿಂದ ಬರುವ ಪ್ರಯಾಣಿಕರು, ವಿಶೇಷವಾಗಿ ಮಹಿಳೆಯರು ಮತ್ತು ಹಿರಿಯ ನಾಗರಿಕರು ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ತಿಳಿಸಿದ್ದಾರೆ.

ಗುತ್ತಿಗೆದಾರರು ಶೌಚಾಲಯದ ನಿರ್ವಹಣೆಗೆ ಗಮನಹರಿಸದಿದ್ದರೂ ಸಂಬಂಧಪಟ್ಟ ಸಾರಿಗೆ ನಿಗಮದ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಂಡಿಲ್ಲ. ಸಾರ್ವಜನಿಕರ ಮೂಲಭೂತ ಅಗತ್ಯಗಳಿಗೆ ಸಂಬಂಧಿಸಿದ ಇಂತಹ ಗಂಭೀರ ಸಮಸ್ಯೆಯನ್ನು ನಿರ್ಲಕ್ಷಿಸಿರುವುದು ಅಧಿಕಾರಿಗಳ ಕಾರ್ಯವೈಖರಿಯ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಶೌಚಾಲಯದ ಅವ್ಯವಸ್ಥೆಗೆ ಕೆಕೆಆರ್‌ಟಿಸಿ ರಾಯಚೂರು ವಿಭಾಗೀಯ ನಿಯಂತ್ರಣಾಧಿಕಾರಿಯನ್ನು ಹೊಣೆಗಾರರನ್ನಾಗಿ ಪರಿಗಣಿಸಿ, ಕಾರಣ ಕೇಳಿ ನೋಟಿಸ್ ಜಾರಿಗೊಳಿಸಬೇಕು. ನಿರ್ವಹಣೆಯಲ್ಲಿ ಲೋಪ ಕಂಡುಬಂದಲ್ಲಿ ಸಂಬಂಧಪಟ್ಟ ಗುತ್ತಿಗೆದಾರರು ಹಾಗೂ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಮುಚ್ಚಿರುವ ಮಹಿಳಾ ಮತ್ತು ಪುರುಷರ ಶೌಚಾಲಯಗಳನ್ನು ತಕ್ಷಣ ತೆರೆಯಿಸಿ, ನೀರು, ವಿದ್ಯುತ್, ಸ್ವಚ್ಛತೆ ಹಾಗೂ ನಿರ್ವಹಣಾ ಸಿಬ್ಬಂದಿ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸಬೇಕು. ಪ್ರಯಾಣಿಕರು, ಸಾರ್ವಜನಿಕರು ಹಾಗೂ ಸಾರಿಗೆ ಸಿಬ್ಬಂದಿಯ ಅನುಕೂಲಕ್ಕಾಗಿ ದಿನದ 24 ಗಂಟೆಯೂ ಶೌಚಾಲಯ ಬಳಕೆಗೆ ಲಭ್ಯವಾಗುವಂತೆ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಆರ್.ಎಂ. ನಡುಮನಿ ಮನವಿ ಮಾಡಿದ್ದಾರೆ.

ಶೌಚಾಲಯದ ಪ್ರಸ್ತುತ ಸ್ಥಿತಿಯನ್ನು ತೋರಿಸುವ ಛಾಯಾಚಿತ್ರಗಳನ್ನು ದೂರಿನೊಂದಿಗೆ ಲಗತ್ತಿಸಿ, ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಶೀಘ್ರ ಪರಿಹಾರ ಕಲ್ಪಿಸುವಂತೆ ಕೆಕೆಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕರನ್ನು ಆಗ್ರಹಿಸಿದ್ದಾರೆ.

